ಸಂಪಾದಕ : ಶಿವಕುಮಾರ್ ಕೆ. ವರ್ಲಕೊಂಡ

PRGI : KNKAN/26/A2919
E-mail: skandagirivani@gmail.com

# ಸ್ಕಂದಗಿರಿ ವಾಣಿ

ಕನ್ನಡ ದಿನಪತ್ರಿಕೆ

₹2/-

Editor : SHIVAKUMAR. K.
M.: 81475 82389 / 9743641515

ಸತ್ಯದ ಧ್ವನಿ

SKANDAGIRI VANI Kannada Daily WEDNESDAY | October 14, 2026 | Volume 01 | Issue 88 | Pages 4 |

# ಸತ್ಯ ಸಾಯಿ ಗ್ರಾಮದಲ್ಲಿ ಶಾರದಾ ನವರಾತ್ರಿ ಉತ್ಸವ

## ಮೋದಿ ಲಿಸ್ಟ್‌ನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆ, ಅಭಿವೃದ್ಧಿಗೆ ಆದ್ಯತೆ: ಶೋಭಾ ಕರಂದ್ಲಾಜೆ

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಕ್ಕಬಳ್ಳಾಪುರ:** ಸತ್ಯ ಸಾಯಿ ಗ್ರಾಮದಲ್ಲಿ ನಡೆಯುತ್ತಿರುವ ಶಾರದಾ ನವರಾತ್ರಿ ಆಚರಣೆಯ ಮೂರನೇ ದಿನವಾದ ಮಂಗಳವಾರ ಅ.13 ಚಂದ್ರಘಂಟಾ ರೂಪದಲ್ಲಿ ದೇವಿಯನ್ನು ಆರಾಧಿಸಲಾಯಿತು. ಪವಮಾನ ಹೋಮ ಮತ್ತು ಆಶ್ಲೇಷ ಬಲಿಯನ್ನು ಶ್ರದ್ಧಾಭಕ್ತಿಯಿಂದ ನೆರವೇರಿಸಲಾಯಿತು.

ಹೋಮದ ಪೂರ್ಣಾಹುತಿಯನ್ನು ನೆರವೇರಿಸಿ ಮಾತನಾಡಿದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಉಚಿತ ಶಿಕ್ಷಣ ಮತ್ತು ಆರೋಗ್ಯ ಸೇವೆಯ ಮೂಲಕ ಸದ್ಗುರು ಶ್ರೀ ಮಧುಸೂದನ ಸಾಯಿ ಅವರು ಜಗತ್ತಿಗೆ ಮಹತ್ವದ ಕೊಡುಗೆ ನೀಡುತ್ತಿದ್ದಾರೆ. ಅವರ ಜೊತೆಗೆ ಇಡೀ ಸಮಾಜ, ದೇಶ ನಿಲ್ಲಬೇಕಾಗಿದೆ ಎಂದು ಕರೆ ನೀಡಿದರು.

ದೇಶದ ಅತ್ಯಂತ ಹಿಂದುಳಿದ ಜಿಲ್ಲೆಗಳ ಪೈಕಿ ಕೆಲವನ್ನು ಆದ್ಯತೆಯ ಮೇರೆಗೆ ಅಭಿವೃದ್ಧಿಪಡಿಸಲು ಪ್ರಧಾನಿ ನರೇಂದ್ರ ಮೋದಿ ಅವರು ಒಂದು ಪಟ್ಟಿ ಸಿದ್ಧಪಡಿಸಿದ್ದಾರೆ. ಅದರಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯೂ ಸೇರಿದೆ.

ಇಲ್ಲಿನ ಚಟುವಟಿಕೆಗಳನ್ನು ಅವರು ಸ್ವತಃ ಪರಿಶೀಲಿಸುತ್ತಿರುತ್ತಾರೆ. ಸದ್ಗುರುಗಳ ಸಂಸ್ಥೆಗಳು ಕಾರ್ಯನಿರ್ವಹಿಸುವ ಮೊದಲಿನ ಪರಿಸ್ಥಿತಿಯನ್ನು ಇಂದಿನ



ಸ್ಥಿತಿಗೆ ಹೋಲಿಸಿದರೆ ವ್ಯತ್ಯಾಸ ನಿಚ್ಚಳವಾಗಿ ಗೋಚರಿಸುತ್ತದೆ ಎಂದು ವಿವರಿಸಿದರು.

ನಮ್ಮ ಸದ್ಗುರುಗಳು ಅಧ್ಯಾತ್ಮವನ್ನು ಸೇವೆಯೊಂದಿಗೆ ಬೆಸೆದಿದ್ದಾರೆ. ಉಚಿತ ವೈದ್ಯಕೀಯ ಶಿಕ್ಷಣ ಕೊಡುವ ಕಾಲೇಜು ಮುದ್ದೇನಹಳ್ಳಿಯಲ್ಲಿ ಮಾತ್ರವೇ ಇದೆ.

ಇಂಥ ಪ್ರಯೋಗ ಮಾಡುತ್ತಿರುವ ಜಗತ್ತಿನ ಏಕೈಕ ಗುರು ಇವರೊಬ್ಬರೇ ಎಂದು ಶ್ಲಾಘಿಸಿದರು.

ಆಶೀರ್ವಚನ ನೀಡಿದ ಒನ್ ವರ್ಲ್ಡ್ ಒನ್ ಫ್ಯಾಮಿಲಿ ಮಿಷನ್ ಸಂಸ್ಥಾಪಕರಾದ ಸದ್ಗುರು ಶ್ರೀ ಮಧುಸೂದನ ಸಾಯಿ, ನಮ್ಮ ದೇಶವು ಮಹಿಳೆಯರು ಪುರುಷರಷ್ಟೇ ಸಮಾನರು ಎನ್ನುವುದಲ್ಲ ಪುರುಷರಿಗಿಂತಲೂ ಶ್ರೇಷ್ಠ ಎಂದೇ ಪ್ರತಿಪಾದಿಸುತ್ತದೆ. ಜೀವನಕ್ಕೆ ಅಗತ್ಯವಾಗಿ ಬೇಕಿರುವ ಎಲ್ಲಕ್ಕೂ ಮಾತೃತ್ವವನ್ನು ಕಲ್ಪಿಸಿ ಗೌರವಿಸಲಾಗುತ್ತಿದೆ ಎಂದು ವಿಶ್ಲೇಷಿಸಿದರು.

ಜಗತ್ತಿನ ಯಾವುದೇ ಗಂಡಸು ಪ್ರಸವವೇದನೆ ಅನುಭವಿಸಲಾರ, ಮಗುವನ್ನು ಗರ್ಭದಲ್ಲಿ ಹೊತ್ತು ಸಾಕಲಾರ. ಈ ಮಹತ್ವದ ಜವಾಬ್ದಾರಿಯನ್ನು ಮಹಿಳೆಗೆ ನೀಡಿರುವ ದೇವರು ತನ್ನ ಸೃಷ್ಟಿಯಲ್ಲಿಯೇ ಅವಳಿಗೆ ಆದ್ಯತೆ ನೀಡಿದ್ದಾನೆ. ನಿಜವಾದ ಅರ್ಥದಲ್ಲಿ ಸಮಾಜವನ್ನು ಮಹಿಳೆಯರೇ ಮುನ್ನಡೆಸುತ್ತಿದ್ದಾರೆ ಎಂದು ಹೇಳಿದರು.

ಸುಗಮ ಬದುಕಿಗೆ ಸಹಕರಿಸುವ ಎಲ್ಲವನ್ನೂ ದೇವರೆಂದೇ ಗುರುತಿಸಿ ಆರಾಧಿಸುವ ಸಂಸ್ಕೃತಿ ನಮ್ಮದು.

ಹಾವುಗಳ ಪಾರಿಸರಿಕ ಮೌಲ್ಯ



ಅರಿತಿದ್ದ ನಮ್ಮ ಹಿರಿಯರು ಆಶ್ಲೇಷ ಬಲಿ, ನಾಗರಕಲ್ಲಿನ ಸಂಪ್ರದಾಯಗಳ ಮೂಲಕ ಜನರಿಗೆ ಅವುಗಳ ಮಹತ್ವ ತಿಳಿಸಲು ತಮ್ಮದೇ ಮಾರ್ಗ ಕಂಡುಕೊಂಡಿದ್ದರು ಎಂದು ನುಡಿದರು.

ಶೃಂಗೇರಿಯಿಂದ ಬಂದಿರುವ ಋತ್ವಿಜರ ತಂಡದ ಮುಖ್ಯಸ್ಥರಾದ ಯಜ್ಞನಾರಾಯಣ ಭಟ್ ಮಾತನಾಡಿ, ಮನಸ್ಸಿಗೆ ಏಕಕಾಲಕ್ಕೆ ಆಹ್ಲಾದ ಮತ್ತು ಏಕಾಗ್ರತೆಯನ್ನು ಕೊಡುವ ಮೂಲಕ ಅಧ್ಯಾತ್ಮ ಸಾಧನೆಯಲ್ಲಿ ಚಂದ್ರಘಂಟಾ ಮಾತೆ ಮುನ್ನಡೆಸುತ್ತಾಳೆ ಎನ್ನುವುದು ಪಾರಂಪರಿಕ ನಂಬಿಕೆ. ದಿನನಿತ್ಯದ ನಮ್ಮ ಬದುಕಿನಲ್ಲಿ ತಿಳಿದೋ–ತಿಳಿಯದೆಯೋ ಆದ ಪಾಪಗಳನ್ನು ಪವಮಾನದ ಹೋಮದ ಮಂತ್ರಗಳು ತೊಳೆದು ಪವಿತ್ರಗೊಳಿಸುತ್ತವೆ ಎಂದು ನವರಾತ್ರಿಯ 3ನೇ ದಿನ ಮಹತ್ವ ವಿವರಿಸಿದರು.

ಪುಟ್ಟ ಬಾಲಕಿಯರು ಭಂಡಾಸುರ ವಧೆ ನೃತ್ಯ ಪ್ರದರ್ಶನ ನೀಡಿದರು. ವಿಧಾನ ಪರಿಷತ್ ಸದಸ್ಯ ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಪ್ರಶಾಂತಿ ಬಾಲ ಮಂದಿರ ಟ್ರಸ್ಟ್ ಅಧ್ಯಕ್ಷ ಡಾ ಬಿ.ಎನ್.ನರಸಿಂಹಮೂರ್ತಿ ಇತರರು ಉಪಸ್ಥಿತರಿದ್ದರು.

**ಧನ್ವಂತರಿ, ವಿಷ್ಣು ಸಹಸ್ರನಾಮ ಹೋಮ**

ಸತ್ಯ ಸಾಯಿ ಗ್ರಾಮದಲ್ಲಿ ಶಾರದಾ ನವರಾತ್ರಿಯ ನಾಲ್ಕನೇ ದಿನವಾದ ಬುಧವಾರ ಅ.14 ಬೆಳಿಗ್ಗೆ 7:30 ರಿಂದ ಧನ್ವಂತರಿ ಹೋಮ ಮತ್ತು ವಿಷ್ಣು ಸಹಸ್ರನಾಮ ಹೋಮಗಳು ನಡೆಯಲಿವೆ. ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

**ಸತ್ಯಸಾಯಿಗ್ರಾಮಕ್ಕೆ ಜಪಾನ್ ರೈತರ ನಿಯೋಗ**

ಸದ್ಗುರು ಶ್ರೀ ಮಧುಸೂದನ ಸಾಯಿ ಅವರ ಉಪಕ್ರಮಗಳಿಂದ ಕರ್ನಾಟಕದ ರಾಗಿ ಬೆಳೆ ಪದ್ಧತಿಯಲ್ಲಿ ಆಗುತ್ತಿರುವ ಪರಿವರ್ತನೆಯನ್ನು ತಿಳಿದುಕೊಳ್ಳಲು ಜಪಾನ್‌ನ 15 ರೈತರ ನಿಯೋಗವು ಅಗ್ ಬಯೊಟೆಕ್ ಕಂಪನಿಯ ತಾಕಾ ಮಸಾಸನನ್ ನೇತೃತ್ವದದಲ್ಲಿ ಮಂಗಳವಾರ ಸತ್ಯ ಸಾಯಿ ಗ್ರಾಮಕ್ಕೆ ಭೇಟಿ ನೀಡಿತು. ಸತ್ಯ ಸಾಯಿ ಅನ್ನಪೂರ್ಣ ಟ್ರಸ್ಟ್ ಮೂಲಕ ದೇಶದ 1 ಕೋಟಿ ಮಕ್ಕಳಿಗೆ ಪ್ರತಿದಿನ ಮುಂಜಾನೆ ಸಾಯಿ ಶ್ಯೂರ್ ಪೌಷ್ಟಿಕ ಆಹಾರ ನೀಡುತ್ತಿರುವ ವಿಚಾರ ತಿಳಿದ ನಿಯೋಗದ ಸದಸ್ಯರು ತಾವೂ ಹೇಗೆ ಈ ಕಾರ್ಯದಲ್ಲಿ ಕೈಜೋಡಿಸಬಹುದು ಎನ್ನುವ ಬಗ್ಗೆ ಮಾಹಿತಿ ಪಡೆದುಕೊಂಡರು.

ಜಪಾನ್ ನಿಯೋಗಕ್ಕೆ ಸುಭಿಕ್ಷಾ ಸಾವಯವ ಕೃಷಿಕರ ಬಹುರಾಜ್ಯ ಸಹಕಾರ ಸಂಘದ ಮುಖ್ಯಸ್ಥರಾದ ಅ.ಶ್ರೀ. ಆನಂದ ಮತ್ತು ಸಾಯಿ ಶ್ಯೂರ್‌ನ ನಿರ್ದೇಶಕರಾದ ಭರಣಿ ಪ್ರಸಾದ್ ಸಂಸ್ಥೆಯ ಕಾರ್ಯಚಟುವಟಿಕೆಗಳನ್ನು ವಿವರಿಸಿದರು. ಕರ್ನಾಟಕದ ರಾಗಿ ಆಧಾರಿತ ಉತ್ಪನ್ನಗಳಿಗೆ ಜಪಾನ್‌ನಲ್ಲಿ ಮಾರುಕಟ್ಟೆ ಕಲ್ಪಿಸುವುದು, ಬೆಳೆ ಪದ್ಧತಿ ತಂತ್ರಜ್ಞಾನ ವಿನಿಮಯದ ಕುರಿತು ಅರ್ಥಪೂರ್ಣ ಚರ್ಚೆ ನಡೆಯಿತು.

### ಚಿಂತಾಮಣಿಯಲ್ಲಿ ಮಾರಕಾಸ್ತ್ರಗಳಿಂದ ಕೊಚ್ಚಿ ಮಹಿಳೆ ಕೊಲೆ–ಅಪ್ರಾಪ್ತೆಯ ಮಗಳ ಮೇಲೆ ಹಲ್ಲೆಗೆ ಯತ್ನ



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಂತಾಮಣಿ:** ಚಿಂತಾಮಣಿ ನಗರದ ಅಂಜನಿ ಬಡಾವಣೆಯಲ್ಲಿ ಮಹಿಳೆಯೊಬ್ಬರ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ, ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಸೋಮವಾರ ಸಂಜೆ ನಡೆದಿದೆ. ಇಂದು ಚಿಂತಾಮಣಿ ನಗರವನ್ನು ಬೆಚ್ಚಿಬೀಳಿಸಿದ್ದು, ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹೋ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

ಚಿಂತಾಮಣಿ ನಗರದ ಅಂಜನಿ ಬಡಾವಣೆಯಲ್ಲಿ ಮಹಿಳೆಯೊಬ್ಬರ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ, ಬರ್ಬರವಾಗಿ ಕೊಲೆ ಮಾಡಿರುವ ಘಟನೆ ಸೋಮವಾರ ಸಂಜೆ ನಡೆದಿದೆ. ಇಂದು ಚಿಂತಾಮಣಿ ನಗರವನ್ನು ಬೆಚ್ಚಿಬೀಳಿಸಿದ್ದು, ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹೋ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ.

ತಾಯಿಯೊಂದಿಗೆ ಕಾಲ್ನಡಿಗೆಯಲ್ಲಿ ತೆರಳುತ್ತಿದ್ದ ಅಪ್ರಾಪ್ತ ವಯಸ್ಸಿನ ಮಗಳ ಮೇಲೂ ದುಷ್ಕರ್ಮಿ ಹಲ್ಲೆಗೆ ಯತ್ನಿಸಿದ್ದು, ಆಕೆ ಕಿರುಚಿಕೊಂಡು ಸ್ಥಳದಿಂದ ಪರಾರಿಯಾಗಿದ್ದಾಳೆ ಎಂದು ತಿಳಿದುಬಂದಿದೆ. ಕೊಲೆಯಾದ ಮಹಿಳೆಯನ್ನು ಚಿಂತಾಮಣಿ ತಾಲ್ಲೂಕಿನ ಕಾಪಲ್ಲಿ ಗ್ರಾಮದ ನಿವಾಸಿ, 36 ವರ್ಷದ ಸುಮಿತ್ರಮ್ಮ ಎಂದು ಗುರುತಿಸಲಾಗಿದೆ. ಹಲ್ಲೆಯಿಂದ 12 ವರ್ಷದ ಅಪ್ರಾಪ್ತ ಬಾಲಕಿ ಪಾರಾಗಿದ್ದಾಳೆ.

ಸೋಮವಾರ ಸಂಜೆ ನಗರದ ಸರ್ಕಾರಿ ಪಾಲಿಟೆಕ್ನಿಕ್ ಆಟದ ಮೈದಾನದಲ್ಲಿ ಆಯೋಜಿಸಿದ್ದ ದಸರಾ ಉತ್ಸವಕ್ಕೆ ತೆರಳಿ ತಾಯಿ–ಮಗಳು ಮನೆಗೆ ವಾಪಸ್ಸು ಮರಳುತ್ತಿದ್ದರು. ಈ ವೇಳೆ ಅಂಜನಿ ಬಡಾವಣೆಯ ಪಿಟೀಲ್ ಶ್ರೀನಿವಾಸ್ ಅವರ ಮನೆಯ ಸಮೀಪದ ರಸ್ತೆ ತಿರುವಿನಲ್ಲಿ ದ್ವಿಚಕ್ರ ವಾಹನದಲ್ಲಿ ಬಂದ ವ್ಯಕ್ತಿಯೊಬ್ಬ ದೂರದಲ್ಲಿ ವಾಹನ ನಿಲ್ಲಿಸಿ, ತಲೆಗೆ ಟೋಪಿ ಧರಿಸಿಕೊಂಡು ಬಂದು ಸುಮಿತ್ರಮ್ಮ ಅವರ ಮೇಲೆ ಮಾರಕಾಸ್ತ್ರದಿಂದ ದಾಳಿ ನಡೆಸಿದ್ದಾನೆ ಎನ್ನಲಾಗಿದೆ.

ಮಹಿಳೆಯ ದೇಹದ ವಿವಿಧ ಭಾಗಗಳಿಗೆ ಹಲ್ಲೆ ನಡೆಸಿದ ಆರೋಪಿ, ಜೊತೆಯಲ್ಲಿದ್ದ ಮಗಳ ಮೇಲೂ ದಾಳಿಗೆ ಯತ್ನಿಸಿದ್ದಾನೆ ಎಂದು ತಿಳಿದುಬಂದಿದೆ. ಈ ವೇಳೆ ಬಾಲಕಿ ಕಿರುಚಿಕೊಂಡು ಅಲ್ಲಿಂದ ತಪ್ಪಿಸಿಕೊಂಡಿದ್ದಾಳೆ ಎನ್ನಲಾಗಿದೆ. ಬಳಿಕ ಆರೋಪಿ ಸ್ಥಳದಿಂದ ಪರಾರಿಯಾಗಿದ್ದಾನೆ.

ಸುಮಿತ್ರಮ್ಮ ಅವರು ಮೂಲತಃ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಬೈಪಲ್ಲಿ ಗ್ರಾಮದವರು ಎಂದು ತಿಳಿದುಬಂದಿದೆ. ಕೆಲ ವರ್ಷಗಳ ಹಿಂದೆ ಚಿಂತಾಮಣಿ ತಾಲ್ಲೂಕಿನ ಕಾಪಲ್ಲಿ ಗ್ರಾಮದ ವೆಂಕಟರೆಡ್ಡಿ ಅವರನ್ನು ವಿವಾಹವಾಗಿದ್ದರು ಎನ್ನಲಾಗಿದೆ.

ದಂಪತಿ ನಡುವೆ ವೈಮನಸ್ಸು ಉಂಟಾಗಿ, ಇತ್ತೀಚೆಗೆ ಪತಿಯಿಂದ ದೂರವಾಗಿ ವಿಚ್ಛೇದನಕ್ಕೆ ಮುಂದಾಗಿದ್ದರು ಎಂಬ ಮಾಹಿತಿ ಲಭ್ಯವಾಗಿದೆ. ಪತಿಯಿಂದ ದೂರವಾದ ಬಳಿಕ ಅದೇ ಗ್ರಾಮದ ರಮೇಶ್ ಎಂಬವರೊಂದಿಗೆ ಸುಮಿತ್ರಮ್ಮ ಸಂಪರ್ಕದಲ್ಲಿದ್ದರು ಎನ್ನಲಾಗಿದ್ದು, ರಮೇಶ್ ಅವರು ಚಿಂತಾಮಣಿಯ ಅಂಜನಿ ಬಡಾವಣೆಯಲ್ಲಿ ಮನೆಯೊಂದನ್ನು ಬಾಡಿಗೆಗೆ ಪಡೆದುಕೊಂಡಿದ್ದ ಮನೆಯಲ್ಲಿ ಸುಮಿತ್ರಮ್ಮ ಮತ್ತು ಮಗಳು ವಾಸವಿದ್ದರು ಎಂದು ತಿಳಿದುಬಂದಿದೆ.

ಮೃತ ಮಹಿಳೆಯ ಮಗಳು ತನ್ನ ತಾಯಿಯ ಮೊದಲ ಪತಿ ವೆಂಕಟರೆಡ್ಡಿ ಅವರ ಮೇಲೆ ಅನುಮಾನ ವ್ಯಕ್ತಪಡಿಸಿದ್ದಾಳೆ ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಕೈಗೊಂಡಿದ್ದಾರೆ. ಆದರೆ, ಕೊಲೆಗೆ ನಿಖರವಾದ ಕಾರಣ ಹಾಗೂ ಆರೋಪಿಯ ಗುರುತು ಇನ್ನೂ ಅಧಿಕೃತವಾಗಿ ದೃಢಪಟ್ಟಿಲ್ಲ.

ಘಟನೆಯ ಮಾಹಿತಿ ತಿಳಿದ ಕೂಡಲೇ ಚಿಂತಾಮಣಿ ನಗರ ಪೊಲೀಸ್ ಠಾಣೆಯ ಪೊಲೀಸರು ಹಾಗೂ ಡಿವೈಎಸ್ಪಿ ರಘು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ. ಘಟನೆಗೆ ಸಂಬಂಧಿಸಿ ಪೊಲೀಸರು ತನಿಖೆ ಮುಂದುವರಿಸಿದ್ದು, ಆರೋಪಿಯನ್ನು ಪತ್ತೆಹಚ್ಚಲು ಕ್ರಮ ಕೈಗೊಂಡಿದ್ದಾರೆ.

# ಕಾಂಗ್ರೆಸ್ ಸೋಲಿಸಲು ಒಗ್ಗಟ್ಟಿನಿಂದ ಶ್ರಮಿಸುತ್ತೇವೆ–ಹರಿನಾಥ್ ರೆಡ್ಡಿ

## ಬೂತ್ ಮಟ್ಟದಿಂದ ಸಂಘಟನೆ ಬಲಪಡಿಸಲು ಎನ್‌ಡಿಎ ನಿರ್ಧಾರ

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಗುಡಿಬಂಡೆ:** ಮುಂಬರುವ ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಚುನಾವಣೆಗಳಲ್ಲಿ ಗೆಲುವು ಸಾಧಿಸುವ ಗುರಿಯೊಂದಿಗೆ ಎನ್‌ಡಿಎ ಮುಖಂಡರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಲು ಮುಂದಾಗಿದ್ದಾರೆ. ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಏಳು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಲ್ಲೂ ಗೆಲುವು ಸಾಧಿಸಲು ಬೂತ್ ಮಟ್ಟದಿಂದ ಸಂಘಟನೆ ಬಲಪಡಿಸುವುದಾಗಿ ಎನ್‌ಡಿಎ ಮುಖಂಡ ಹರಿನಾಥ್ ರೆಡ್ಡಿ ತಿಳಿಸಿದರು.

ತಾಲೂಕಿನ ಉಲ್ಲೋಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶ್ರೀ ಪ್ರಸನ್ನ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ಬಳಿಕ ಎನ್‌ಡಿಎ ಮುಖಂಡರು ಒಗ್ಗೂಡಿ ಮುಂಬರುವ ಚುನಾವಣೆಗಳ ಸಿದ್ಧತೆ ಕುರಿತು ಚರ್ಚಿಸಿದರು.

ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲೂ ಮುಖಂಡರು ಹಾಗೂ ಕಾರ್ಯಕರ್ತರನ್ನು



ಒಗ್ಗೂಡಿಸಿ, ಬೂತ್ ಮಟ್ಟದಲ್ಲಿ ಸಂಘಟನೆ ಬಲಪಡಿಸುವ ಮೂಲಕ ಚುನಾವಣೆಯನ್ನು ಎದುರಿಸಲು ನಿರ್ಧರಿಸಿದರು.

ಸಂಸದ ಕೆ. ಸುಧಾಕರ್ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ನಿರ್ದೇಶನದಂತೆ ಮುಂದಿನ ಚುನಾವಣೆಗಳನ್ನು ಎದುರಿಸಲು ಸಿದ್ಧರಿದ್ದೇವೆ. ಹೈಕಮಾಂಡ್ ಮುಂದಿನ ದಿನಗಳಲ್ಲಿ ತೆಗೆದುಕೊಳ್ಳುವ ನಿರ್ಧಾರಕ್ಕೆ ಎಲ್ಲರೂ ಬದ್ಧರಾಗಿರುತ್ತೇವೆ.

ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಸೇರಿದಂತೆ ಸ್ಥಳೀಯ ಚುನಾವಣೆಗಳಲ್ಲಿ ಒಗ್ಗಟ್ಟಿನಿಂದ ಕೆಲಸ ಮಾಡುತ್ತೇವೆ. ನಮ್ಮಲ್ಲಿ ಒಗ್ಗಟ್ಟಿನ ವಿಚಾರದಲ್ಲಿ ಯಾವುದೇ ಎರಡನೇ ಮಾತಿಲ್ಲ.

ಕಳೆದ 15 ವರ್ಷಗಳಿಂದ ಈ ಭಾಗದಲ್ಲಿ ಬೇರು ಬಿಟ್ಟಿರುವ ಕಾಂಗ್ರೆಸ್ ಪಕ್ಷವನ್ನು ಅಧಿಕಾರದಿಂದ ದೂರವಿಡಲು ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸುತ್ತೇವೆ ಎಂದು ಎನ್‌ಡಿಎ ಮುಖಂಡ ಹರಿನಾಥ್ ರೆಡ್ಡಿ ಹೇಳಿದರು.

ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷ ಕೇಶವರೆಡ್ಡಿ, ಕೊನಪ್ಪರೆಡ್ಡಿ, ರಾಮಲಿಂಗಪ್ಪ ಸೇರಿದಂತೆ ಹಿರಿಯ ಮುಖಂಡರ ಮಾರ್ಗದರ್ಶನದಲ್ಲಿ ಚುನಾವಣಾ ಕಾರ್ಯತಂತ್ರ ರೂಪಿಸಿ, ಗ್ರಾಮ ದಿಂದ ಗ್ರಾಮಕ್ಕೆ ತೆರಳಿ ಕಾರ್ಯಕರ್ತರನ್ನು ಸಂಘಟಿಸಲು ಮುಂದಾಗಿದ್ದಾರೆ. ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದ ಏಳೂ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಲ್ಲಿ ಗೆಲುವು ಸಾಧಿಸುವ ಗುರಿಯೊಂದಿಗೆ ಈಗಿನಿಂದಲೇ ಸಿದ್ಧತೆ ಆರಂಭಿಸುವುದಾಗಿ ಎನ್‌ಡಿಎ ಮುಖಂಡರು ವಿಶ್ವಾಸ ವ್ಯಕ್ತಪಡಿಸಿದರು.

# ಕಾಯಕವನ್ನೇ ನಂಬಿ ಬದುಕು ಕಟ್ಟಿಕೊಂಡ ನೂಲಿಯ ಚಂದಯ್ಯ

## ಸಮಾಜಕ್ಕೆ ಸದಾ ಪ್ರೇರಣೆ–ಶಾಸಕ ಡಾ.ಎಂ.ಸಿ.ಸುಧಾಕರ್

**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಂತಾಮಣಿ :** ಕಾಯಕದ ಮೂಲಕ ಜೀವನ ಸಾಗಿಸಬೇಕು, ಕಾಯಕದಿಂದ ಬಂದ ಹಣದಿಂದಲೇ ಸಂತೃಪ್ತ ಜೀವನ ನಡೆಸಬೇಕು, ಇತರರ ಹಣಕ್ಕಾಗಿ ಆಸೆ ಪಡೆಯಬಾರದು ಹಾಗೂ ಕಾಯಕದಿಂದ ದುಡಿದು ಬದುಕನ್ನು ನಡೆಸಬೇಕೆಂದು ಶ್ರೀ ಶಿವಶರಣ ನೊಲಿಯ ಚಂದ್ರಯ್ಯನವರ ಜಯಂತ್ಸೋತವದಲ್ಲಿ ಪಾಲ್ಗೊಂಡಿದ್ದ ನೂಲಿಯ ಚಂದ್ರಯ್ಯನವರ ಕಾಯಕವೇ ನಮ್ಮ ಜೀವನದ ಗುಣಪಾಠವಾಗಬೇಕೆಂದು ಶಾಸಕ ಡಾ.ಎಂ.ಸಿ.ಸುಧಾಕರ್ ರವರು ತಿಳಿಸಿದರು.

ಚಿಂತಾಮಣಿ ನಗರದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ನಡೆದ ಕೊರಚ ಮತ್ತು ಕೊರಮ ಸ್ವಯಂ ಸೇವಾ ಸಂಘದವತಿಯಿಂದ ನಡೆದ ಶ್ರೀ ಶಿವಶರಣ ನೂಲಿಯ ಚಂದ್ರಯ್ಯರ ಜಯಂತೋತ್ಸವದಲ್ಲಿ ಭಾಗವಹಿಸಿ ದೀಪ ಬೆಳಗುವುದರ ಮೂಲಕ ಚಾಲನೆ ನೀಡಿ ಮಾತನಾಡಿದರು.

ಬಸವಣ್ಣನವರ ಸಮಕಾಲೀನರಾದ ಶ್ರೀ ಶಿವಶರಣ ನೂಲಿಯ ಚಂದ್ರಯ್ಯನವರ ಜಯಂತೋತ್ಸವವನ್ನು ಅದ್ದೂರಿಯಾಗಿ ಆಯೋಜಿಸಿದ್ದು ನೂಲಿಯ ಚಂದ್ರಯ್ಯನವರು ಹುಲ್ಲಿನ ಮೂಲಕ ನೂಲನ್ನು ತಯಾರಿಸಿ ಮಾರುವಂತಹ ಕಾಯಕದಿಂದ ಜೀವನ ನಡೆಸುತ್ತಿದ್ದವರು ಅವರ ಕಾಯಕ ಜೀವನ ಎಲ್ಲರಿಗೂ ಮಾರ್ಗದರ್ಶನವಾಗಿದೆಯೆಂದರು.

ಈ ಸಮುದಾಯದವರು ನಮ್ಮ ಕುಟುಂಬದ ಜೊತೆ ಬಹಳ ಗುರುತಿಸಿಕೊಂಡಿರುವಂತಹವ 'ರೆಲ್ಲರೂ ಭಾಗವಹಿಸಿದ್ದು ನಮ್ಮ ತಾತನವರ ಕಾಲದಿಂದಲೂ ನಮ್ಮ ಕುಟುಂಬಕ್ಕೆ ಬೆಂಬಲವಾಗಿದ್ದು



ನನ್ನ 22 ವರ್ಷದ ರಾಜಕೀಯ ಜೀವನದುದ್ದಕ್ಕೂ ಜೊತೆಗಿದ್ದು ನಮ್ಮ ಗೆಲುವಿಗೆ ಬಲ ತುಂಬಿದಂತಹ ಸಮುದಾಯದವರಾಗಿದ್ದೀರೆಂದರು.

ನೂಲಿಯ ಚಂದ್ರಯ್ಯನವರನ್ನು ಪರಿಚಯ ಮಾಡಿಕೊಳ್ಳತಕ್ಕಂತಹ ಒಂದು ಕಿರು ಚಿತ್ರಣವನ್ನು ಹಾಗೂ ಅವರು ಹಾಕಿಕೊಟ್ಟಿರುವ ದಾರಿಯಲ್ಲಿ ಯಾವ ರೀತಿ ನಡೆಯಬೇಕೆಂಬುದನ್ನು ನಾವು ತಿಳಿಯಬೇಕಾಗಿದ್ದು ಅದರಂತೆ ನಡೆಯಬೇಕಾಗಿದೆಯೆಂದರು.

ಇಂದಿನ ಪೀಳಿಗೆಗೆ ಒಂದು ಕಿರುಚಿತ್ರದ ಮುಖಾಂತರ ತೋರಿಸುವುದು ಬಹಳ ಉತ್ತಮವಾದಂತಹ ಕೆಲಸ. ಇದೇ ಕಾರಣಕ್ಕೆ ಇಂದು ಅಂಬೇಡ್ಕರ್ ಭವನದಲ್ಲಿ ಅವರ ಜೀವನ, ಅವರ ಬದುಕು, ಅವರ ಕಷ್ಟ ಕಾರ್ಪಣ್ಯಗಳು, ಅವರ ಸಾಧನೆ, ಅವರ ಗುರಿಯೇನಿತ್ತು, ಇವೆಲ್ಲವನ್ನ ಸಮಸ್ತ ನಾಡಿನ ಜನತೆಗೆ, ಯುವ ಪೀಳಿಗೆಗೆ ತಲುಪಿಸುವಂತಹ ಕೆಲಸವಾಗಬೇಕಾಗಿದೆಯೆಂದರು.

ಆಧುನಿಕ ಯುಗದಲ್ಲಿ ಉದ್ಯೋಗಗಳ ಕೊರತೆಯಿದ್ದು, ಅದನ್ನು ಪಡೆಯಬೇಕಾಗಿದರೆ ಕೌಶಲ್ಯ ಆಧಾರಿತವಾದಂತಹ ಶಿಕ್ಷಣ ಬೇಕು, ಗ್ರಂಥಾಲಯ, ಡಿಜಿಟಲ್ ಗ್ರಂಥಾಲಯ ಇತ್ಯಾದಿಗಳನ್ನು ನಿರ್ಮಾಣ ಮಾಡುತ್ತಿದ್ದು ಇದರಿಂದ ಜ್ಞಾನಾರ್ಜನೆ ಹೆಚ್ಚಲಿದ್ದು ಅದರ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ನಾಂದಿಯಾಗುತ್ತದೆಂದರು.

ನಗರದ ಪ್ರಮುಖ ಬೀದಿಗಳಲ್ಲಿ ನೂಲಿಯ ಚಂದ್ರಯ್ಯನವರ ಭಾವಚಿತ್ರಗಳನ್ನು ಅಲಂಕೃತ ಪಲ್ಲಕ್ಕಿಗಳಲ್ಲಿ ಮೆರವಣಿಗೆ ಮಾಡಲಾಯಿತು, ಮಹಿಳೆಯರು, ಸಮುದಾಯದ ಮುಖಂಡರು ಮೆರವಣಿಗೆ ಉದ್ದಕ್ಕೂ ಸಾಗಿಬಂದರು.

ಸಮುದಾಯದ ಗಣ್ಯರಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ದೇವನಹಳ್ಳಿ ಕ್ಷೇತ್ರದ ಮಾಜಿ ಶಾಸಕ ಚಂದ್ರಣ್ಣ, ಕುಳವ ಸಮಾಜದ ರಾಜ್ಯಾಧ್ಯಕ್ಷ ಶಿವಾನಂದ ಭಜಂತ್ರಿ, ಚಿಂತಾಮಣಿ ತಾಲ್ಲೂಕು ಅಧ್ಯಕ್ಷ ವೆಂಕಟರವಣಸ್ವಾಮಿ, ಕೆಪಿಸಿಸಿ ಸದಸ್ಯ ಕುರುಟಹಳ್ಳಿ ಕೃಷ್ಣಮೂರ್ತಿ, ನಿವೃತ್ತ ಡಿಸಿ ಎಸ್.ಟಿ.ಆಂಜನ್‌ಕುಮಾರ್, ಹೆಚ್‌ಕೆಎಸ್ ಸಂಸ್ಥೆಯ ಹೇಮಾಂತ್ ಕುಮಾರ್, ಉಚ್ಚನ್ಯಾಯಾಲಯ ವಕೀಲ ಕಿರಣ್ ಕುಮಾರ್, ನಗರಸಭೆ ಮಾಜಿ ವೆಂಕಟರವಣಸ್ವಾಮಿ, ಹರೀಶ್ ಚಿಕ್ಕಬಳ್ಳಾಪುರ ಜಿಲ್ಲಾಧ್ಯಕ್ಷ ಚಿಕ್ಕಪ್ಪಯ್ಯ, ಕೋಲಾರ ಜಿಲ್ಲಾಧ್ಯಕ್ಷ ಶಂಕರಪ್ಪ, ನಾಗರಾಜ್ ಸಮುದಾಯ ಮುಖಂಡರು, ಜನರು ಉಪಸ್ಥಿತರಿದ್ದರು.

# ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲುವು ನಿಶ್ಚಿತ: ಶಾಸಕ ಎಸ್.ಆರ್. ಶ್ರೀನಿವಾಸ್



ಗುಬ್ಬಿ: ಈ ಬಾರಿ ನಮ್ಮ ಅಭ್ಯರ್ಥಿ ಗೆಲ್ಲುವುದು ನಿಶ್ಚಿತ ಎಂಬ ವಿಶ್ವಾಸವಿದೆ. ಈ ಹಿಂದೆ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಗೆಲುವು ಸಾಧಿಸಲು ಸಾಧ್ಯವಾಗಿರಲಿಲ್ಲ. ಆದರೆ, ಈ ಬಾರಿ ಒಂದು ವರ್ಷ ಮುಂಚಿತವಾಗಿಯೇ ಅಭ್ಯರ್ಥಿಯನ್ನು ಘೋಷಿಸಿ, ಚುನಾವಣೆಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ಎಂದು

ಶಾಸಕ ಎಸ್.ಆರ್. ಶ್ರೀನಿವಾಸ್ ತಿಳಿಸಿದರು.

ತಾಲ್ಲೂಕಿನ ಹೇರೂರು ಗ್ರಾಮದ ಬಾಲಾಜಿ ಕಲ್ಯಾಣ ಮಂಟಪದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಆಯೋಜಿಸಿದ್ದ ಆಗ್ನೇಯ ಪದವೀಧರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶಶಿ ಹುಲಿಕುಂಟೆಮಠ್ ಅವರ ಪರ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು ಪ್ರತಿಯೊಬ್ಬ ಕಾಂಗ್ರೆಸ್ ಕಾರ್ಯಕರ್ತರು ಪ್ರಾಮಾಣಿಕವಾಗಿ ಕೆಲಸ ಮಾಡಿ, ಮತದಾರರನ್ನು ಸಂಪರ್ಕಿಸಿ, ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಿಸುವ ಮೂಲಕ ಕಾಂಗ್ರೆಸ್ ಅಭ್ಯರ್ಥಿ ಶಶಿ ಹುಲಿಕುಂಟೆಮಠ್ ಅವರನ್ನು ಗೆಲ್ಲಿಸಲು ಶ್ರಮಿಸಬೇಕು. ಕಾಂಗ್ರೆಸ್ ಪಕ್ಷದ ಶಾಸಕರು ಹಾಗೂ ಮುಖಂಡರು ಅಭ್ಯರ್ಥಿಯ ಗೆಲುವಿಗೆ ಒಗ್ಗಟ್ಟಿನಿಂದ ಶ್ರಮಿಸುತ್ತಿದ್ದಾರೆ. ಪ್ರತಿಯೊಬ್ಬ ಮತದಾರರನ್ನು ತಲುಪಿ, ಮತದಾನದ ಮಹತ್ವ ತಿಳಿಸಬೇಕು. ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಿ, ಕಾರ್ಯಕರ್ತರಿಗೆ ಜವಾಬ್ದಾರಿಗಳನ್ನು ಹಂಚಿಕೆ ಮಾಡಲಾಗಿದೆ.

ಹೀಗಾಗಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಸಂಘಟಿತವಾಗಿ ಕೆಲಸ ಮಾಡಿದರೆ ಗೆಲುವು ಸಾಧ್ಯವಾಗಲಿದೆ ಎಂದರು.

ಈಗಾಗಲೇ ಹಲವು ಚುನಾವಣೆಗಳಲ್ಲಿ ಅನುಭವ ಹೊಂದಿರುವ ಮುಖಂಡರು ಮತ್ತು ಕಾರ್ಯಕರ್ತರು ತಮ್ಮ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸಬೇಕು. ಯಾವುದೇ ಭಿನ್ನಾಭಿಪ್ರಾಯಗಳಿಗೆ ಅವಕಾಶ ನೀಡದೆ, ಹೆಚ್ಚಿನ ಸಂಖ್ಯೆಯಲ್ಲಿ ಮತಗಳನ್ನು ಚಲಾಯಿಸುವಂತೆ ಪದವೀಧರ ಮತದಾರರನ್ನು ಪ್ರೇರೇಪಿಸಿ ಅಭ್ಯರ್ಥಿಯ ಗೆಲುವಿಗೆ ಸಹಕರಿಸಬೇಕು. ಎಂದು ತಿಳಿಸಿದರು.

ಕಾಂಗ್ರೆಸ್ ಅಭ್ಯರ್ಥಿ ಶಶಿ ಹುಲಿಕುಂಟೆಮಠ್ ಮಾತನಾಡಿ, ಕಾಂಗ್ರೆಸ್ ಪಕ್ಷವು ಯುವ ವಯಸ್ಸಿನಲ್ಲಿಯೇ ನನ್ನ ಮೇಲೆ ವಿಶ್ವಾಸವಿಟ್ಟು ಅಭ್ಯರ್ಥಿಯಾಗಿ ಘೋಷಿಸಿದೆ. ಇದಕ್ಕಾಗಿ ಶಾಸಕ ಎಸ್.ಆರ್. ಶ್ರೀನಿವಾಸ್ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಬಿಜೆಪಿ ಮತ್ತು ಜೆಡಿಎಸ್ ಮುಖಂಡರು ಈ ಹಿಂದೆ ಹಲವು ಬಾರಿ ಗೆಲುವು ಸಾಧಿಸಿದ್ದರೂ ಕ್ಷೇತ್ರದ ಅಭಿವೃದ್ಧಿಗೆ ಏನು ಕೊಡುಗೆ ನೀಡಿದ್ದಾರೆ ಎಂಬುದನ್ನು ಮತದಾರರು ಪ್ರಶ್ನಿಸಬೇಕು. ಯುವಕರು, ಶಿಕ್ಷಕರು ಮತ್ತು ಪದವೀಧರರು ಹಿಂದಿನ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು ಈ ಬಾರಿ ಮತ ಚಲಾಯಿಸಬೇಕು. ಕ್ಷೇತ್ರದಲ್ಲಿ ಬದಲಾವಣೆ ತರಲು ಯುವ ಅಭ್ಯರ್ಥಿಗೆ ಅವಕಾಶ ನೀಡಬೇಕು ಎಂದು ಮನವಿ ಮಾಡಿದರು.

ನಾನು ಈಗಾಗಲೇ ಎರಡು ಬಾರಿ ಕ್ಷೇತ್ರ ಪ್ರವಾಸ ಕೈಗೊಂಡಿದ್ದು, ವಿವಿಧ ಭಾಗಗಳ ಮತದಾರರನ್ನು ಭೇಟಿ ಮಾಡಿದ್ದೇನೆ. ಅನೇಕರು ಯುವ ಅಭ್ಯರ್ಥಿಯ ಅಗತ್ಯವನ್ನು ವ್ಯಕ್ತಪಡಿಸಿದ್ದಾರೆ. ಪದವೀಧರ ಕ್ಷೇತ್ರದಲ್ಲಿ ಪರಿವರ್ತನೆ ತರುವುದರ ಜತೆಗೆ ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸಿ, ಅವರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಉದ್ದೇಶ ಹೊಂದಿದ್ದೇನೆ ಎಂದರು.

ಪಂಚಾಯಿತಿ ಮಟ್ಟದಲ್ಲಿ ಪದವೀಧರ ಮತದಾರರ ನೋಂದಣಿ ಕಾರ್ಯಕ್ಕೆ ಪಕ್ಷದ ಮುಖಂಡರು ಶ್ರಮಿಸಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಮತದಾರರನ್ನು ನೋಂದಾಯಿಸಲು ಪ್ರಯತ್ನಿಸಲಾಗಿದೆ. ಶಿಕ್ಷಕರಿಗೆ ದೊರೆಯಬೇಕಾದ ಸೌಲಭ್ಯಗಳು ಹಾಗೂ ತುಟ್ಟಿಭತ್ಯೆ ಸೇರಿದಂತೆ ಅವರ ಹಿತಾಸಕ್ತಿಯ ವಿಚಾರಗಳಿಗೆ ಆದ್ಯತೆ ನೀಡಬೇಕಿದೆ. ಉದ್ಯೋಗಾವಕಾಶಗಳ ಸೃಷ್ಟಿ ಮತ್ತು ಪದವೀಧರರ ಸಮಸ್ಯೆಗಳಿಗೆ ಪರಿಣಾಮಕಾರಿಯಾಗಿ ಸ್ಪಂದಿಸುವ ಉದ್ದೇಶದಿಂದ ಈ ಕ್ಷೇತ್ರದ ಚುನಾವಣೆಯಲ್ಲಿ ಸ್ಪರ್ಧಿಸಿದ್ದೇನೆ. ಜಿಲ್ಲೆಯ ಎಲ್ಲ ಮುಖಂಡರು, ಕಾರ್ಯಕರ್ತರು, ಶಿಕ್ಷಕರು ಮತ್ತು ಪದವೀಧರರ ಸಹಕಾರದೊಂದಿಗೆ ಮುನ್ನಡೆಯುತ್ತೇನೆ. ಮೊದಲ ಆದ್ಯತೆಯ ಮತ ನೀಡಿ ನನ್ನನ್ನು ಆಯ್ಕೆ ಮಾಡಬೇಕು ಎಂದು ಮನವಿ ಮಾಡಿದರು.

ಈ ಸಂಧರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ಚಂದ್ರಶೇಖರ್, ತಾಲ್ಲೂಕು ಅಧ್ಯಕ್ಷ ಕೆ.ಆರ್. ವೆಂಕಟೇಶ್, ಗುರುರೇಣುಕಾರಾಧ್ಯ, ಕೆ.ಆರ್. ತಾತಯ್ಯ, ದಾಸಪ್ಪ, ಸಣ್ಣರಂಗಯ್ಯ, ಶಂಕರಾನಂದ್, ನರಸಿಂಹಯ್ಯ, ಮಂಜುನಾಥ್, ದಯಾನಂದ, ಶಶಿ, ಸಲೀಂ, ಅಶೋಕ್, ಚಿಕ್ಕರಂಗಣ್ಣ, ಪಟ್ಟಣ ಪಂಚಾಯಿತಿ ಮಾಜಿ ಸದಸ್ಯರು, ಶಿಕ್ಷಕರು, ಪದವೀಧರರು ಹಾಗೂ ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರು ಸೇರಿದಂತೆ ಇನ್ನಿತರರು ಹಾಜರಿದ್ದರು.

# ಗುಬ್ಬಿಯಲ್ಲಿ ಪಂಜಾಬ್ ನ್ಯಾಷನಲ್ ಬ್ಯಾಂಕ್‌ನ 161ನೇ ಶಾಖೆ ಉದ್ಘಾಟನೆ



ಗುಬ್ಬಿ: ಸಾರ್ವಜನಿಕರು ಬ್ಯಾಂಕಿನ ವಿವಿಧ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಶಾಖೆಯ ಅಭಿವೃದ್ಧಿಗೆ ಸಹಕರಿಸಬೇಕು. ದೇಶಾದ್ಯಂತ 10359 ಕ್ಕೂ ಹೆಚ್ಚು ಶಾಖೆಗಳನ್ನು ಹೊಂದಿದೆ. ಎಂದು ಬೆಂಗಳೂರು ವಲಯದ ಮುಖ್ಯ ವ್ಯವಸ್ಥಾಪಕ ಆನಂದ್ ಕುಮಾರ್ ತಿಳಿಸಿದರು.

ಪಟ್ಟಣದ ನ್ಯಾಯಾಲಯದ ಕಚೇರಿ ಎದುರು ನೂತನವಾಗಿ ಆರಂಭಗೊಂಡ ಕರ್ನಾಟಕದಲ್ಲಿ ಪಂಜಾಬ್ ನ್ಯಾಷನಲ್ ಬ್ಯಾಂಕಿನ 161ನೇ ಶಾಖೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ಸಾರ್ವಜನಿಕ ವಲಯದ ಪ್ರಮುಖ ಬ್ಯಾಂಕ್‌ಗಳಲ್ಲಿ ಒಂದಾಗಿರುವ ಪಂಜಾಬ್ ನ್ಯಾಷನಲ್ ಬ್ಯಾಂಕ್, ಗ್ರಾಹಕರ ವಿಶ್ವಾಸ ಗಳಿಸುವುದರ ಜೊತೆಗೆ ಉತ್ತಮ ಸೇವೆ ಒದಗಿಸಲು ಬದ್ಧವಾಗಿದೆ. ನಂಬಿಕೆ, ಗ್ರಾಹಕ ಸೇವೆ ಮತ್ತು ಆರ್ಥಿಕ ಪ್ರಗತಿಯ ಮೂಲಕ ಜನರ ಜೀವನದಲ್ಲಿ ಸಮೃದ್ಧಿ ತರುವುದೇ ಬ್ಯಾಂಕಿನ ಸೇವಾ ಸಂಕಲ್ಪವಾಗಿದೆ.

ಪಟ್ಟಣ ದ ಜನರ ಬ್ಯಾಂಕಿಂಗ್ ಅಗತ್ಯಗಳನ್ನು ಪೂರೈಸುವ ಉದ್ದೇಶದಿಂದ ನೂತನ ಶಾಖೆ ಆರಂಭಿಸಲಾಗಿದೆ. ರಾಷ್ಟ್ರೀಕೃತ ಬ್ಯಾಂಕ್ ಆಗಿರುವ ಪಂಜಾಬ್ ನ್ಯಾಷನಲ್ ಬ್ಯಾಂಕ್ ಗ್ರಾಹಕರಿಗೆ ವಿಶ್ವಾಸಾರ್ಹ ಬ್ಯಾಂಕಿಂಗ್ ಸೇವೆಗಳನ್ನು ಒದಗಿಸುತ್ತಿದೆ. ಎಂದು ತಿಳಿಸಿದರು.

ಮಂಗಳೂರು ವೃತ್ತದ ಮುಖ್ಯಸ್ಥ ರಾಬಿನ್ ಗೋಯಲ್ ಮಾತನಾಡಿ, ಸಾಮಾನ್ಯ ಜನರ ಅನುಕೂಲಕ್ಕಾಗಿ ಬ್ಯಾಂಕಿನ ವತಿಯಿಂದ ವಿವಿಧ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಗ್ರಾಹಕರು ಬ್ಯಾಂಕಿಂಗ್ ಸೇವೆಗಳ ಜೊತೆಗೆ ವಿಮೆ ಹಾಗೂ ಸಾಮಾಜಿಕ ಭದ್ರತಾ ಯೋಜನೆಗಳ ಸೌಲಭ್ಯಗಳನ್ನೂ ಪಡೆದುಕೊಳ್ಳಬೇಕು ಎಂದು ಹೇಳಿದರು.

ವಿಭಾಗೀಯ ಸಹಾಯಕ ವ್ಯವಸ್ಥಾಪಕ ಅರುಣ್ ಕುಮಾರ್ ಮಾತನಾಡಿ, ಕೃಷಿ, ಕೃಷಿ ಯಂತ್ರೋಪಕರಣಗಳ ಖರೀದಿ, ಹೈನುಗಾರಿಕೆ ಹಾಗೂ ಕೃಷಿ ಆಧಾರಿತ ಉದ್ಯಮಗಳಿಗೆ ಕಿಸಾನ್ ಕ್ರೆಡಿಟ್ ಕಾರ್ಡ್ ಮೂಲಕ ಸಾಲ ಸೇರಿದಂತೆ ವಿವಿಧ ಸಾಲ ಸೌಲಭ್ಯಗಳನ್ನು ಒದಗಿಸಲಾಗುತ್ತದೆ. ಮನೆ ನಿರ್ಮಾಣ, ವಾಹನ ಖರೀದಿ ಮತ್ತು ಉನ್ನತ ಶಿಕ್ಷಣಕ್ಕೂ ಸಾಲ ಸೌಲಭ್ಯಗಳು ಲಭ್ಯವಿದ್ದು, ಅರ್ಹರು ಅವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಶಾಖಾ ವ್ಯವಸ್ಥಾಪಕಿ ಶ್ವೇತಾ ಮಾತನಾಡಿ, ಗ್ರಾಹಕರಿಗೆ ಗೌರವಯುತ, ಸ್ನೇಹಪರ ಹಾಗೂ ಗುಣಮಟ್ಟದ ಸೇವೆ ಒದಗಿಸುವುದು ಶಾಖೆಯ ಮುಖ್ಯ ಉದ್ದೇಶವಾಗಿದೆ. ತಾಲೂಕಿನ ಜನರು ಬ್ಯಾಂಕಿನ ಸೌಲಭ್ಯಗಳನ್ನು ಬಳಸಿಕೊಂಡು ಶಾಖೆಯ ಬೆಳವಣಿಗೆಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಪಿ ಎನ್ ಬಿ ಇಯು ಕರ್ನಾಟಕ ಪ್ರಧಾನ ಕಾರ್ಯದರ್ಶಿ ರಮೇಶ್ ಮಾತನಾಡಿ, ಗ್ರಾಹಕರಿಗೆ ವಿವಿಧ ಬ್ಯಾಂಕಿಂಗ್ ಸೇವೆಗಳು ಹಾಗೂ ಸಾಲ ಸೌಲಭ್ಯಗಳು ಲಭ್ಯವಿದ್ದು, ಗುಬ್ಬಿ ಪಟ್ಟಣದ ಆರ್ಥಿಕ ಬೆಳವಣಿಗೆಗೆ ಈ ಶಾಖೆ ಸಹಕಾರಿಯಾಗಲಿದೆ. 10 ಸಾವಿರ ದಿಂದ1 ಕೋಟಿವರೆಗೆ ಸಾಲ ಸೌಲಭ್ಯ ನೀಡಲಾಗುತ್ತದೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಈ ಸಂಧರ್ಭದಲ್ಲಿ ಮಂಗಳೂರು ವೃತ್ತದ ಮುಖ್ಯ ವ್ಯವಸ್ಥಾಪಕ ತಿಜೋ ಜಾನ್, ತುಮಕೂರು ಶಾಖೆಯ ವ್ಯವಧ್ಧ ನಾಗರಾಜು, ಅಂಜನ, ಶಾಖಾಧಿಕಾರಿ ಎಸ್. ವೆಂಕಟೇಶ್, ಗ್ರಾಹಕ ಸೇವಾ ಸಿಬ್ಬಂದಿಗಳಾದ ಸರಿತಾ, ಕೆ.ಎಲ್.ವಿಶ್ವಂತ್, ಮಮತಾ ಸೇರಿದಂತೆ ಬ್ಯಾಂಕಿನ ಸಿಬ್ಬಂದಿ ಹಾಗೂ ಗಣ್ಯರು ಉಪಸ್ಥಿತರಿದ್ದರು.

## ರುಡ್‌ಸೆಟ್ ಸಂಸ್ಥೆ : ಫಾಸ್ಟ್ ಫುಡ್ ತಯಾರಿಕೆ ತರಬೇತಿಗೆ ಅರ್ಜಿ ಆಹ್ವಾನ

ತುಮಕೂರು(ಕ.ವಾ.) : ರುಡ್‌ಸೆಟ್ ಸಂಸ್ಥೆ ವತಿಯಿಂದ ಅಕ್ಟೋಬರ್ 22 ರಿಂದ 12 ದಿನಗಳ ಉಚಿತ ಫಾಸ್ಟ್ ಫುಡ್ ತಯಾರಿಕೆ ತರಬೇತಿ ನೀಡಲು ಅರ್ಹ ಗ್ರಾಮೀಣ ನಿರುದ್ಯೋಗಿ ಯುವಕ, ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು 18 ರಿಂದ 50 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಆಧಾರ್ ಕಾರ್ಡ್ ಹಾಗೂ ಬಿಪಿಎಲ್ ಕಾರ್ಡ್ ಹೊಂದಿರಬೇಕು. ತರಬೇತಿಯು ವಸತಿಯುತವಾಗಿದ್ದು, ತರಬೇತಿ ಅವಧಿಯಲ್ಲಿ ಉಚಿತ ಊಟದ ವ್ಯವಸ್ಥೆ ಕಲ್ಪಿಸಲಾಗುವುದು. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9481506564, 9380162042, 9241482541ನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆ ಬೆಂಗಳೂರು ಶಾಖೆಯ ನಿರ್ದೇಶಕ ಗಿರಿಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಪತ್ತೆಗೆ ಮನವಿ

ರಾಮನಗರ, (ಕರ್ನಾಟಕ ವಾರ್ತೆ): ರಾಮನಗರ ತಾಲ್ಲೂಕಿನ ಬಸವನಪುರ ಕಾಲೋನಿಯ ಮಾಯಾಗಾನಹಳ್ಳಿಯ ನಿವಾಸಿ ರವಿ (23 ವರ್ಷ) ಎಂಬುವರು ಕಾಣೆಯಾಗಿದ್ದಾರೆ ಎಂದು ಪೊಲೀಸ್ ಠಾಣೆಗೆ ದೂರು ದಾಖಲಾಗಿದೆ.ಚಹರೆಯ ವಿವರ:– ಸಾಧಾರಣ ಮೈಕಟ್ಟು, ಇವರು ಕಾಣೆಯಾಗುವಾಗ ಕಪ್ಪು ಬಣ್ಣದ ಅರ್ಧ ತೋಳಿನ ಟೀಶರ್ಟ್ ಹಾಗೂ ಖಾಕಿ ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಇವರು ಕಂಡು ಬಂದರೆ ಆರಕ್ಷಕ ಉಪ ನಿರೀಕ್ಷಕರು, ರಾಮನಗರ (ಗ್ರಾ) ಪೊಲೀಸ್ ಠಾಣೆ, ಬೆಂಗಳೂರು ದಕ್ಷಿಣ ಜಿಲ್ಲೆ, ರಾಮನಗರ. ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

# ಅಂದ್ರಹಳ್ಳಿಯಲ್ಲಿ 10ನೇ ವರ್ಷದ ಅದ್ದೂರಿ ವಿಶ್ವಕರ್ಮ ಜಯಂತ್ಯೋತ್ಸವ ಸಂಭ್ರಮ



ಬೆಂಗಳೂರು : ಮಾಜಿ ಸಚಿವ ಹಾಗೂ ಯಶವಂತಪುರ ವಿಧಾನಸಭಾ ಕ್ಷೇತ್ರದ ಶಾಸಕ ಎಸ್ ಟಿ ಸೋಮಶೇಖರ್ ಅವರ ಮಾರ್ಗದರ್ಶನ ಸಹಕಾರ ಕೃಪೆಯಿಂದ ಅಂದ್ರಹಳ್ಳಿ ವಿಶ್ವಕರ್ಮ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹೇಮಂತ್ ಮತ್ತು ಮಹಿಳಾ ಅಧ್ಯಕ್ಷೆ ಶ್ರೀಮತಿ ಕವಿತಾ ಸ್ವಾಮಿ ಆಚಾರ್ಯ ಹಾಗೂ ಪದಾಧಿಕಾರಿಗಳ ನೇತೃತ್ವದಲ್ಲಿ ಎಜಿಎನ್ ಕನ್ವೆನ್ಷನ್ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಪೂಜ್ಯ ಶ್ರೀಶ್ರೀ ಜ್ಞಾನ ಘನವಿದ್ಯಾ ತೀರ್ಥ ಮಹಾಸ್ವಾಮಿಗಳು ವಿಶ್ವ ಬ್ರಾಹ್ಮಣ ಮಹಾಸಭಾ ಸಂಸ್ಥಾನ ವಿಶ್ವಕರ್ಮ ಜಗದ್ಗುರು ಪೀಠ, ಅರೇಮಾದನಹಳ್ಳಿ ದಿವ್ಯ ಸಾನ್ನಿಧ್ಯದಲ್ಲಿ ಭೈರವೇಶ್ವರ ಟಿಂಬರ್ ರಿಂದ ಬೆಳ್ಳಿ ರಥದಲ್ಲಿ ಭಗವಾನ್ ವಿರಾಟ್ ವಿಶ್ವಕರ್ಮ ಭಾವಚಿತ್ರವನ್ನು ಕಲಾ ತಂಡಗಳಿಂದ ಡೊಳ್ಳುಕುಣಿತ ವೀರಗಾಸೆ ನೃತ್ಯ ಪೂಜಾ ಕುಣಿತ ಕೋಲಾಟ ಕಂಸಾಳೆ ಅಂದ್ರಹಳ್ಳಿ ಮುಖ್ಯ ರಸ್ತೆ ಮೂಲಕ ಎಜಿಎನ್ ಕನ್ವೆನ್ಷನ್ ಹಾಲ್ ನ ವರೆಗೆ ಮೆರವಣಿಗೆ ನಡೆಯಿತು.

ಅಂದ್ರಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಎಂ. ತೋಪಯ್ಯ ಹಾಗೂ ಅವರ ಸುಪುತ್ರ ಅಂದ್ರಹಳ್ಳಿ ವಾರ್ಡಿನ ಕಾಂಗ್ರೆಸ್ ಜಿಬಿಎ ಪ್ರಬಲ ಆಕಾಂಕ್ಷಿ ಅಭ್ಯರ್ಥಿ ಪ್ರಕಾಶ್ ಟಿ. ಅವರು ಎಜಿಎನ್ ಕನ್ವೆನ್ಷನ್ ಹಾಲ್ (ಕಲ್ಯಾಣ ಮಂಟಪ) ಮತ್ತು ಸಾವಿರಾರು ಜನರಿಗೆ ಊಟದ ವ್ಯವಸ್ಥೆ ಮಾಡಿದರು.

ಅಂದ್ರಹಳ್ಳಿ ವಾರ್ಡಿನ ಕಾಂಗ್ರೆಸ್ ಅಧ್ಯಕ್ಷ ಮುನಿರಾಜು, ವಿಶ್ವಕರ್ಮ ಸಮಾಜದ ನಿಗಮದ ಅಧ್ಯಕ್ಷ ಪಿ ಸುಜ್ಞಾನ ಮೂರ್ತಿ, ಮಾಜಿ ಅಧ್ಯಕ್ಷರಾದ ಬಾಬು ಪತ್ತಾರ್, ಸತ್ಯವತಿ, ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ವಿಶ್ವಕರ್ಮ ಸಮಾಜದ ಪ್ರಭಾವಿ ಮುಖಂಡ ಭಾಸ್ಕರ್ ಆಚಾರಿ, ಟ್ರಾವೆಲ್ಸ್ ಮಂಜುನಾಥ್,

ಬಸವರಾಜ ನಾಯಕ್, ಅಶೋಕ್ ಕಾಳಾಚಾರಿ ಹೆಗ್ಗನಹಳ್ಳಿ,ವಿಶ್ವಕರ್ಮ ಸಂಘದ ಮುಖಂಡರಾದ ಹೆಚ್ ಇ ನಿಂಗಾಚಾರ್, ಹೆಚ್ ಬಿ ವೀರಾಚಾರ್, ಚಂದ್ರಶೇಖರ್, ಉಮೇಶ್, ರಾಜು, ಪ್ರಕಾಶ್,ರವಿ ಜಿ, ಮನೋಹನ್, ಸತೀಶ್ ಸೇರಿದಂತೆ ಅಂದ್ರಹಳ್ಳಿಯ ಸಮಸ್ತ ನಾಗರಿಕರು ಮಹಿಳೆಯರು ಮುಂತಾದವರು ಇದ್ದರು.

# ತರಬೇತಿದಾರರ ವೈದ್ಯರಿಂದ ರೋಗಿಗಳಿಗೆ ಚಿಕಿತ್ಸೆ: ಚಿಂತಾಮಣಿ ಆಸ್ಪತ್ರೆ ವೈದ್ಯರ ವಿರುದ್ಧ ಡಾ.ಎನ್.ಮಂಜುಳಾ ಗರಂ



ಚಿಂತಾಮಣಿ:ಸರ್ಕಾರದ ಅಧೀನ ಕಾರ್ಯದರ್ಶಿ ಡಾ.ಎನ್.ಮಂಜುಳಾ ಅವರು ಇಂದು ಚಿಂತಾಮಣಿ ನಗರದ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಗೆ ದಿಢೀರ್ ಭೇಟಿ ನೀಡಿ,ಆಸ್ಪತ್ರೆಯ ವಿವಿಧ ವಿಭಾಗಗಳನ್ನು ಪರಿಶೀಲಿಸಿದರು.ಈ ವೇಳೆ ಕಂಡುಬಂದ ಲೋಪದೋಷಗಳು ಹಾಗೂ ಸಾರ್ವಜನಿಕರ ದೂರುಗಳ ಕುರಿತು ವೈದ್ಯರು ಮತ್ತು ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು.

ಆಸ್ಪತ್ರೆಯ ಗರ್ಭಿಣಿ ಮಹಿಳೆಯರ ವಿಭಾಗಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದ ಸಂದರ್ಭದಲ್ಲಿ ಅಲ್ಲಿ ಅತಿಯಾದ ಜನದಟ್ಟಣೆ ಮತ್ತು ಗೊಂದಲದ ವಾತಾವರಣ ಕಂಡುಬಂತು. ವಿಭಾಗದ ನಿರ್ವಹಣೆಯನ್ನು ಸರಿಯಾದ ರೀತಿಯಲ್ಲಿ ಮಾಡದಿರುವುದನ್ನು ಕಂಡು ಆಸ್ಪತ್ರೆಯ ಸಿಬ್ಬಂದಿ ಹಾಗೂ ವೈದ್ಯರ ಮೇಲೆ ಡಾ.ಮಂಜುಳಾ ಅವರು ತೀವ್ರವಾಗಿ ಗರಂ ಆದರು.

ಸಾರ್ವಜನಿಕರಿಂದ ನೇರ ದೂರುಗಳು

ಆಸ್ಪತ್ರೆ ವೀಕ್ಷಣೆ ವೇಳೆ ಚಿಕಿತ್ಸೆಗಾಗಿ ಆಗಮಿಸಿದ್ದ ಸಾರ್ವಜನಿಕರು ಮತ್ತು ರೋಗಿಗಳು ಆಸ್ಪತ್ರೆಯ ಅವ್ಯವಸ್ಥೆಗಳ ಬಗ್ಗೆ ಅಧೀನ ಕಾರ್ಯದರ್ಶಿಗಳ ಬಳಿ ಅಳಲು ತೋಡಿಕೊಂಡರು.

ಆಸ್ಪತ್ರೆಗೆ ಬರುವ ರೋಗಿಗಳಿಗೆ ಅನುಭವಿ ವೈದ್ಯರ ಬದಲಾಗಿ ಹೆಚ್ಚಿನ ಸಂದರ್ಭದಲ್ಲಿ ತರಬೇತಿ ಪಡೆಯುತ್ತಿರುವವರೇ ಚಿಕಿತ್ಸೆ ನೀಡಲು ಬರುತ್ತಿದ್ದಾರೆ. ಇದರಿಂದ ರೋಗಿಗಳಲ್ಲಿ ಆತಂಕ ಮೂಡಿದೆ ಎಂದು ಸಾರ್ವಜನಿಕರು ದೂರಿದರು.

ತರಬೇತಿ ಪಡೆಯುವ ಸಿಬ್ಬಂದಿಗೆ ಕನ್ನಡ ಭಾಷೆ ಬಾರದಿರುವ ಕಾರಣ ರೋಗಿಗಳು ಹಾಗೂ ವೈದ್ಯಕೀಯ ಸಿಬ್ಬಂದಿ ನಡುವೆ ಸರಿಯಾದ ಸಂವಹನ ಸಾಧ್ಯವಾಗುತ್ತಿಲ್ಲ.

ಸುತ್ತಮುತ್ತಲಿನ ತಾಲೂಕುಗಳು ಹಾಗೂ ಗ್ರಾಮಾಂತರ ಪ್ರದೇಶಗಳಿಂದ ಬಡ ರೋಗಿಗಳೇ ಹೆಚ್ಚಾಗಿ ಇಲ್ಲಿಗೆ ಚಿಕಿತ್ಸೆ ಪಡೆಯಲು ಬರುತ್ತಿರುವುದರಿಂದ, ತರಬೇತಿದಾರರ ಬದಲು ನಿಪುಣ ವೈದ್ಯರೇ ನೇರವಾಗಿ ಚಿಕಿತ್ಸೆ ನೀಡಲು ಮುಂದಾಗಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದರು.

ಸಾರ್ವಜನಿಕರ ದೂರುಗಳನ್ನು ಗಂಭೀರವಾಗಿ ಪರಿಗಣಿಸಿದ ಡಾ.ಎನ್.ಮಂಜುಳಾ ಅವರು ವೈದ್ಯರಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.ವೈದ್ಯರು ಆಪರೇಷನ್ ಥಿಯೇಟರ್ ಅಥವಾ ಆಸ್ಪತ್ರೆಯ ಇತರೆ ವಿಭಾಗಗಳಲ್ಲಿ ದೀರ್ಘಕಾಲ ಕೆಲಸ ನಿರ್ವಹಿಸುವಾಗ ತುರ್ತು ಪರಿಸ್ಥಿತಿಗಳನ್ನು ಎದುರಿಸಲು ಪರ್ಯಾಯ ವೈದ್ಯರನ್ನು ನಿಯೋಜಿಸಲು ಅಗತ್ಯ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು. ರೋಗಿಗಳಿಗೆ ಯಾವುದೇ ರೀತಿಯ ತೊಂದರೆ ಯಾಗದಂತೆ ಆಸ್ಪತ್ರೆಯನ್ನು ಸಮರ್ಥವಾಗಿ ನಿರ್ವಹಿಸುವ ಸಂಪೂರ್ಣ ಜವಾಬ್ದಾರಿ ವೈದ್ಯರ ಮೇಲಿದೆ ಎಂದು ಅವರು ತಾಕೀತು ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಅಧಿಕಾರಿ ಡಾ!ಚೇತನ್, ತಾಲೂಕು ಆರೋಗ್ಯ ಅಧಿಕಾರಿ ಡಾ!ರಾಮಚಂದ್ರ ರೆಡ್ಡಿ, ಆಸ್ಪತ್ರೆಯ ಆಡಳಿತ ಅಧಿಕಾರಿ ಡಾ!ಸಂತೋಷ್ ಕುಮಾರ್, ತಾಲೂಕು ದಂಡಾಧಿಕಾರಿಗಳಾದ ಸುದರ್ಶನ್ ಯಾದವ್, ತಾಲೂಕು ಪಂಚಾಯತಿ ಕಾರ್ಯನಿರ್ವಹಣಾಧಿಕಾರಿ ಆನಂದ್,ಸೇರಿದಂತೆ ಮತ್ತಿತರರು ಇದ್ದರು.

# ಮಹಿಳೆಯರೇ ಸಮಾಜದ ಶಕ್ತಿ: ಡಾ.ಯತೀಂದ್ರ ಸಿದ್ದರಾಮಯ್ಯ



ಮೈಸೂರು:ಅ.13(ಕರ್ನಾಟಕ ವಾರ್ತೆ):– ಮಹಿಳೆಯರೇ ಈ ಸಮಾಜದ ಶಕ್ತಿ ಹಾಗೂ ಕುಟುಂಬದ ಆಧಾರ ಸ್ತಂಭ ಹಾಗಾಗಿ ಮಹಿಳೆಯರಿಗೆ ಎಲ್ಲಾ ಕ್ಷೇತ್ರಗಳಲ್ಲಿ ಹೆಚ್ಚಿನ ಅವಕಾಶ ಸಿಗಬೇಕು ಎಂದು ನಗರಾಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಯತೀಂದ್ರ ಸಿದ್ದರಾಮಯ್ಯ ಅವರು ಹೇಳಿದರು.

ನಗರದ ಜೆ.ಕೆ.ಮೈದಾನದಲ್ಲಿ ಮಹಿಳಾ ಮತ್ತು ಮಕ್ಕಳ ದಸರಾ ಉಪಸಮಿತಿ ವತಿಯಿಂದ ಆಯೋಜಿಸಲಾಗಿದ್ದ ಮಹಿಳಾ ದಸರಾ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರಿಗೆ ಹಿಂದಿನ ಕಾಲದಿಂದಲೂ ಸಮಾನವಾದ ಅವಕಾಶಗಳು ಸಿಕ್ಕಿಲ್ಲ, ಸರಿಯಾದ ಅವಕಾಶ ಸಿಕ್ಕರೆ ಮಹಿಳೆಯರ ಶಕ್ತಿ ಏನೆಂದು ಎಲ್ಲರಿಗೂ ತಿಳಿಯಲಿದೆ ಎಂದು ಪ್ರಶಂಸಿದರು.

ಬುದ್ದ, ಬಸವಣ್ಣ, ಅಂಬೇಡ್ಕರ್ ಅವರಂಥ ಮಹಾನ್ ನಾಯಕರು ಮಹಿಳೆಯರ ಸಮಾನತೆಗಾಗಿ ಅನೇಕ ಹೋರಾಟಗಳನ್ನು ಮಾಡಿದ್ದಾರೆ, ಸಂವಿಧಾನದ ಮೂಲಕ ಇಂದು ಮಹಿಳೆಯರಿಗೆ ಉನ್ನತ ಸ್ಥಾನಗಳು ಸಹಾ ದೊರೆಯುತ್ತಿವೆ ಆದರೂ ಸಹಾ ಹಲವು ಕಡೆಗಳಲ್ಲಿ ಮಹಿಳೆಯರಿಗೆ ಪುರುಷರಷ್ಟು ಸ್ವತಂತ್ರವಿಲ್ಲ ಇದು ದುರದುಷ್ಟಕರ. ಇನ್ನಾದರೂ ಮಹಿಳೆಯರಿಗೆ ಪುರುಷರಷ್ಟೇ ಸಮಾನ ಅವಕಾಶ ಸಿಗಲಿ, ಈ ದಸರಾ ಮಹೋತ್ಸವದಲ್ಲಿ ಅಕ್ಟೋಬರ್ 16 ರವರೆಗೆ ನಡೆಯಲಿರುವ ಈ ಮಹಿಳಾ ದಸರಾದಲ್ಲಿ ಎಲ್ಲಾ ಮಹಿಳೆಯರು ಭಾಗವಹಿಸಿ ಎಲ್ಲರೂ ದಸರಾ ಸಂಭ್ರಮಿಸಿ ಎಂದು ಶುಭ ಕೋರಿದರು.

ರೇಷ್ಮೆ ಹಾಗೂ ಪಶು ಸಂಗೋಪನಾ ಸಚಿವ ಸಿ.ಪುಟ್ಟರಂಗಶೆಟ್ಟಿ ಅವರು ಮಾತನಾಡಿ, ದಸರಾ ಮಹೋತ್ಸವ ಎಂದರೆ ಚಾಮುಂಡೇಶ್ವರಿ ತಾಯಿಯ ಹಬ್ಬ ಹಾಗಾಗಿ ಮಹಿಳೆಯರು ಇದರಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮಹಿಳೆಯರು ಯಾವುದಕ್ಕೂ ಹಿಂಜರಿಯಬಾರದು ಇದು ನಿಮ್ಮ ಕಾರ್ಯಕ್ರಮ ಎಂದು ಮಹಿಳೆಯರಿಗೆ ಶುಭಕೋರಿದರು.

ಈ ವೇಳೆ ಶಾಸಕರಾದ ಹರೀಶ್ ಗೌಡ, ಮಹಿಳಾಭಿವೃದ್ಧಿ ನಿಗಮದ ಅಧಕ್ಷರಾದ ಪದ್ಮಾವತಿ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ರಾಜ್ಯಾ ಉಪಾಧ್ಯಕ್ಷರಾದ ಪುಷ್ಪಾ ಅಮರನಾಥ್, ಮೃಗಾಲಯ ಪ್ರಾಧಿಕಾರ ಅಧ್ಯಕ್ಷರಾದ ಹಾಡ್ಯ ರಂಗಸ್ವಾಮಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಅರುಣ್ ಕುಮಾರ್, ಮಹಿಳಾ ಮತ್ತು ಮಕ್ಕಳ ದಸರಾ ಉಪಸಮಿತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು ಇದ್ದರು.

## ರಾಷ್ಟ್ರೀಯ ವಿಚಾರ ಸಂಕಿರಣ ಸಮ್ಮೇಳನ

ಚಿಕ್ಕಬಳ್ಳಾಪುರ, : ಕರ್ನಾಟಕ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗಸಂಸ್ಥೆಯಾಗಿರುವ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು Critical Minerals coference ಸುಸ್ಥಿರ ಅಭಿವೃದ್ಧಿಗಾಗಿ ವಿರಳ ಖನಿಜ ಮೌಲ್ಯ ಸರಪಳಿಯ ಭದ್ರತೆ (Securing the Critical Mineral Value Chain for Sustainable Development) ವಿಷಯದ ಮೇಲೆ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣ ಸಮ್ಮೇಳನವನ್ನು ನವೆಂಬರ್ 4 ಮತ್ತು 5 ರಂದು ಅಕಾಡೆಮಿಯ ಕಚೇರಿಯಲ್ಲಿ ಆಯೋಜಿಸಲಾಗುತ್ತಿದೆ.

ಈ ಸಮ್ಮೇಳನದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದಾರೆ. ಈ ಸಮ್ಮೇಳನಲ್ಲಿ ವಿಜ್ಞಾನಿಗಳು, ಖನಿಜಾನ್ವೇಷಣೆ, ಗಣಿಗಾರಿಕೆ ಮತ್ತು ಲೋಹಶಾಸ್ತ್ರ ಸಂಸ್ಥೆಗಳು, ಸಂಶೋಧನಾ ವಿದ್ಯಾರ್ಥಿಗಳು, ಶಿಕ್ಷಣ ತಜ್ಞರು, ಕೈಗಾರಿಕೋದ್ಯಮ, ಇಲಾಖೆ/ಸಂಸ್ಥೆಗಳ ಅಧಿಕಾರಿಗಳು, ಉದ್ಯಮಿಗಳು ಮತ್ತು ನವೋದ್ಯಮಗಳ ಪ್ರತಿನಿಧಿಗಳು, ಖರೀದಿದಾರರು ಹಾಗೂ ರಫ್ತುದಾರರು ಭಾಗವಹಿಸಬಹುದು. ಅಲ್ಲದೇ ಯುವ ವಿಜ್ಞಾನಿಗಳು ಮತ್ತು ಸಂಶೋಧನಾ ವಿದ್ಯಾರ್ಥಿಗಳು ತಮ್ಮ ಸಂಶೋಧನಾ ಪ್ರಬಂಧವನ್ನು (Poster Research Paper) ಸಹ ಮಂಡಿಸಲು ಅವಕಾಶ ಕಲ್ಪಿಸಲಾಗಿದ್ದು, ಆಯ್ಕೆಯಾದ ಸಂಶೋಧನಾ ಪ್ರಬಂಧಕ್ಕೆ ನಗದು ಬಹುಮಾನವನ್ನು ನೀಡಲಾಗುವುದು. ಆಸಕ್ತರು ಅಕ್ಟೋಬರ್ 30 ರೊಳಗಾಗಿ (Registration Link: https://forms.gle/wgyoGKPoZVK8RJhCA) ಮೂಲಕ ನೋಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ಅಧಿಕಾರಿಗಳ ಮೊ:9320767819, 9743084194 ಗೆ ಸಂಪರ್ಕಿಸಬಹುದು ಅಥವಾ ಅಕಾಡೆಮಿಯ ವೆಬ್ ಸೈಟ್ https://kstacademy.in ನಲ್ಲಿ ವೀಕ್ಷಿಸಬಹುದು ಎಂದು ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಆರ್.ಆನಂದ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಪತ್ತೆಗೆ ಮನವಿ

ರಾಮನಗರ, (ಕರ್ನಾಟಕ ವಾರ್ತೆ): ರಾಮನಗರ ತಾಲ್ಲೂಕಿನ ಕಸಬಾ ಹೋಬಳಿಯ ಮಾಯಗಾನಹಳ್ಳಿ ಗ್ರಾಮ ನಿವಾಸಿ ಚಂದ್ರಶೇಖರ್ (40 ವರ್ಷ) ಎಂಬುವರು ಕಾಣೆಯಾಗಿದ್ದಾರೆ ಎಂದು ಪೊಲೀಸ್ ಠಾಣೆಗೆ ದೂರು ದಾಖಲಾಗಿದೆ.

ಚಹರೆಯ ವಿವರ:– ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ಕೋಲುಮುಖ, ಇವರು ಕಾಣೆಯಾಗುವಾಗ ತುಂಬು ತೋಳಿನ ಹಳದಿ ಬಣ್ಣದ ಟೀ ಶರ್ಟ್ ಹಾಗೂ ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಮತ್ತು ಗ್ರೇ ಬಣ್ಣದ ಜರ್ಕಿನ್ ಧರಿಸಿರುತ್ತಾರೆ. ಇವರು ಕಂಡು ಬಂದರೆ ಆರಕ್ಷಕ ಉಪ ನಿರೀಕ್ಷಕರು, ರಾಮನಗರ (ಗ್ರಾ) ಪೊಲೀಸ್ ಠಾಣೆ, ಬೆಂಗಳೂರು ದಕ್ಷಿಣ ಜಿಲ್ಲೆ, ರಾಮನಗರ. ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

# ಗುಡಿಬಂಡೆಯಲ್ಲಿ 4ನೇ ವರ್ಷದ ದಸರಾ ಗಣೇಶೋತ್ಸವ, ದುರ್ಗಾಮಾತೆ ಪ್ರತಿಷ್ಠಾಪನೆ



ಗುಡಿಬಂಡೆ: ನವರಾತ್ರಿ ಹಿನ್ನೆಯಲ್ಲಿ ಪಟ್ಟಣದ ಸೋಪ್ಪಿನ ಪೇಟೆಯಲ್ಲಿ ದಸರಾ ಗಣೇಶ ಮಹೋತ್ಸವ ಸಮಿತಿಯಿಂದ 4ನೇ ವರ್ಷದ ಗಣೇಶ ಮೂರ್ತಿ ಹಾಗೂ ದುರ್ಗಾ ಮಾತೆಯ ಪ್ರತಿಷ್ಠಾಪನೆ ಮತ್ತು ಪ್ರಾಣ ಪ್ರತಿಷ್ಠಾಪನ ಕಾರ್ಯವನ್ನು ಅತ್ಯಂತ ಶ್ರದ್ಧಾ ಭಕ್ತಿಯಿಂದ ನೆರವೇರಿಸಲಾಯಿತು.

ಪಟ್ಟಣದ ಸೋಪ್ಪಿನ ಪೇಟೆಯ ಸಪ್ಪಲ್ಲಮ್ಮ ದೇವಾಲಯದ ಸಮಿಪ ದಸರಾ ಗಣೇಶ ಮಹೋತ್ಸವ ಸಮಿತಿ ವತಿಯಿಂದ 4 ನೇ ವರ್ಷದ ದಸರಾ ಗಣಪತಿ ಹಾಗೂ ದುರ್ಗಾ ಮಾತೆಯ ಪ್ರತಿಷ್ಠಾಪನೆ ನೂರಾರುಭಕ್ತಾದಿಗಳ ಸಮ್ಮುಖದಲ್ಲಿ ಅದ್ದೂರಿಯಾಗಿ ನೆರವೇರಿತು. ಈ ಪೂಜಾ ಕಾರ್ಯದಲ್ಲಿ ದಸರಾ ಗಣೇಶ ಮಹೋತ್ಸವ ಸಮಿತಿಯ ಸದಸ್ಯರು ಸೇರಿದಂತೆ ಯುವಕರು ವಿವಿಧ ಸಂಘಟನೆಗಳ ಮುಖಂಡರು, ಮಹಿಳಾ ಮಾತೆಯರು ಪೂಜೆಯಲ್ಲಿ ಬಾಗವಾಹಿಸಿದ್ದರು.

# ಬಡ ರೈತರ ಜಮೀನುಗಳಿಗೆ ಕಾಂಪೌಂಡ್ ನಿರ್ಮಾಣ
## ರಿಯಲ್ ಎಸ್ಟೇಟ್ ಮಾಫಿಯಾ ವಿರುದ್ಧ ಕದಸಂಸ ಹೋರಾಟಕ್ಕೆ ಸಿದ್ಧತೆ




**ಸ್ಕಂದಗಿರಿ ವಾಣಿ ಸುದ್ದಿಜಾಲ**
**ಭಾಗ್ಯನಗರ:** ಬೆಂಗಳೂರಿನ ರಿಯಲ್ ಎಸ್ಟೇಟ್ ರೈತರು ತಮ್ಮ ಜಮೀನುಗಳಿಗೆ ಕಾಂಪೌಂಡುಗಳನ್ನು ಹಾಕಿಕೊಳ್ಳುತ್ತಿರುವುದರಿಂದ ಕೃಷಿಯನ್ನೇ ನಂಬಿಕೊಂಡಿರುವ ಇಲ್ಲಿನ ನಿಜವಾದ ರೈತರು ತಮ್ಮ ಜಮೀನುಗಳಿಗೆ ಹೋಗಲು ದಾರಿ ಇಲ್ಲದಂತೆ ಪರದಾಡುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿಯನ್ನು ಮತ್ತಷ್ಟು ಬಲಿಷ್ಠಗೊಳಿಸಿ ಹೋರಾಟಗಳನ್ನು ನಡೆಸಲು ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಎಂ.ಜಿ.ಕಿರಣ್ ಕುಮಾರ್ ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಇಲ್ಲಿನ ಬಡ ರೈತರಿಂದ ಜಮೀನುಗಳನ್ನು ಖರೀಧಿಸುತ್ತಿರುವ ಬೆಂಗಳೂರಿನ ರಿಯಲ್ ಎಸ್ಟೇಟ್ ರೈತರು ತಮ್ಮ ಜಮೀನುಗಳಿಗೆ ಕಾಂಪೌಂಡುಗಳನ್ನು ನಿರ್ಮಿಸಿಕೊಂಡು ಸಾಮಾನ್ಯ ರೈತರು ತಮ್ಮ ಜಮೀನುಗಳಿಗೆ ಹೋಗಲು ಸಾದ್ಯವಿಲ್ಲದಂತಹ ಪರಿಸ್ಥಿತಿಯನ್ನು ನಿರ್ಮಿಸುತ್ತಿದ್ದಾರೆ. ಈ ಬಗ್ಗೆ ಕ್ರಮ ಜರುಗಿಸಬೇಕಾಗಿರುವ ಅಧಿಕಾರಿಗಳು ಕಣ್ಣೂಮುಚ್ಚಿ ಕುಳಿತಿದ್ದು ನಿಜವಾದ ಬಡ ರೈತರು ಆತಂಕದ ಪರಿಸ್ಥಿತಿಯನ್ನು ಎದುರಿಸುತ್ತಿದ್ದಾರೆ. ತಾಲ್ಲೂಕು ಕಚೇರಿಯಲ್ಲಿ ಪವತಿವಾರ್ಸು ಖಾತೆ ಮಾಡಿಕೊಡಲು 50 ಸಾವಿರ ರೂಪಾಯಿಗಳನ್ನು ಬಡವರಿಂದ ಪಡೆದುಕೊಳ್ಳುತ್ತಿದ್ದಾರೆ.

ಪಾರಂ ನಂ 53 ಮತ್ತು 57 ಶಾಸಕರಿಗೆ ಗೊತ್ತಿಲ್ಲದಂತೆ ದುರುಪಯೋಗವಾಗುತ್ತಿದೆ. ಬಲಾಢ್ಯರಿಗೆ ಭೂಮಿ ಸಿಕ್ಕುತ್ತಿದ್ದರೆ ಬಡವರಿಗೆ ಭೂಮಿ ಸಿಗುತ್ತಿಲ್ಲ. ಇಲ್ಲಿನ ಅಧಿಕಾರಿಗಳು ಸಾಮಾನ್ಯ ಜನರ ಕೆಲಸ ಕಾರ್ಯಗಳನ್ನು ಮಾಡಿಕೊಡುತ್ತಿಲ್ಲ. ಎಸ್ಸಿಪಿ ಎಸ್ಟಿಪಿ ಹಣ ಎಲ್ಲಿ ಹೋಗುತ್ತಿದೆಯೋ ಗೊತ್ತಾಗುತ್ತಿಲ್ಲ. ದಲಿತ ಕಾಲೋನಿಗಳ ಅಭಿವೃದ್ಧಿ ಮರೀಚಿಕೆಯಾಗಿಯೇ ಉಳಿದಿದೆ. ಜ್ವಲಂತ ಸಮಸ್ಯೆಗಳು ಜನರನ್ನು ಕಾಡುತ್ತಿವೆ. ಶಾಸಕ ಎಸ್.ಎನ್.ಸುಬ್ಬಾರೆಡ್ಡಿಯವರು ಸ್ಥಳೀಯರು ಇಲ್ಲಿಯೇ ಹುಟ್ಟಿ ಬೆಳೆದವರು.

ಸಾಮಾನ್ಯ ಕುಟುಂಬದಲ್ಲಿ ಜನಿಸಿರುವ ಅವರಿಗೆ ಇಲ್ಲಿನ ರೈತರ ಮತ್ತು ಬಡವರ ಸಮಸ್ಯೆಗಳ ಸಂಪೂರ್ಣ ಅರಿವಿದೆ. ಆದರೆ ಇಲ್ಲಿ ಶಾಸಕರಾಗಬೇಕೆಂದು ಬರುತ್ತಿರುವವರು ಹೊರಗಿನವರು ಮತ್ತು ವಲಸಿಗರು ಅವರಿಗೆ ಇಲ್ಲಿನ ಸಮಸ್ಯೆಗಳು ಅರ್ಥವಾಗುವುದಿಲ್ಲ. ತಾಂಡವವಾಡುತ್ತಿರುವ ನಿರುದ್ಯೋಗ ಸಮಸ್ಯೆಯನ್ನು ನೀಗಿಸಲು ಕೈಗಾರಿಕೆಗಳ ಸ್ಥಾಪನೆ ಆಗಬೇಕಾಗಿದೆ.

ಬಡವರಿಗೆ, ಶೋಷಿತ ವರ್ಗಗಳ ಪರವಾಗಿ ಕದಸಂಸ ಇಡೀ ರಾಜ್ಯದಾದ್ಯಂತ ಹೋರಾಟಗಳನ್ನು ನಡೆಸಿಕೊಂಡು ಬರುತ್ತಿದೆ. ಬೆನ್ನೆಲುಬಾಗಿ ಕೆಲಸ ಮಾಡುತ್ತಿದೆ. ಹಿಂದುಳಿತ ತಾಲ್ಲೂಕಾಗಿರುವ ಬಾಗೇಪಲ್ಲಿ ತಾಲ್ಲೂಕಿನಲ್ಲಿ ಹಲವಾರು ಸಮಸ್ಯೆಗಳು ಇವೆ. ಹೈಟೆಕ್ ಆಸ್ಪತ್ರೆ ಇಲ್ಲ. ಇಲ್ಲಿನ ಗ್ರಾಮ ಸಹಾಯಕರೆ ತಹಶೀಲ್ದಾರರಂತೆ ವರ್ತಿಸುತ್ತಿದ್ದಾರೆ. ಎಲ್ಲಾ ವ್ಯವಹಾರಗಳು ಅವರೇ ನಡೆಸುತ್ತಿದ್ದಾರೆ.

ಇಂತಹ ಪರಿಸ್ಥಿತಿಯಲ್ಲಿ ಕದಸಂಸ ಸಂಘಟನೆಯನ್ನು ಮತ್ತಷ್ಟು ಬಲಪಡಿಸಲು ರಾಜ್ಯ ಸಂಚಾಲಕ ಹೆಣ್ಣೂರು ಶ್ರೀನಿವಾಸ್ ನೇತೃತ್ವದಲ್ಲಿ ಬಾಗೇಪಲ್ಲಿ ಮತ್ತು ಗುಡಿಬಂಡೆ ತಾಲ್ಲೂಕುಗಳ ಪುನ:ಶ್ಚೇತನ ಕಾರ್ಯಕ್ರಮವನ್ನು ಇದೇ ತಿಂಗಳ 16 ರಂದು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಚಲಪತಿ, ಮಾದೇಶ್ ವೆಂಕಿ, ಶ್ರೀರಾಮ್, ಶಂಕರ, ಬಾಬು, ನಾಗೇಶ್, ಅಂಬರೀಶ್, ಶ್ರೀನಿವಾಸ್, ವೆಂಕಟರಮಣಪ್ಪ, ಮಲ್ಲಿಕಾರ್ಜುನ, ಕೇಶವ, ರಾಮಾಂಜಿ, ಗಂಗೇನಾಯಕ, ಅಶ್ವತ್ಥಪ್ಪ ಮತ್ತಿತರರು ಉಪಸ್ತಿತರಿದ್ದರು.

# ಬಣ ರಾಜಕೀಯದಿಂದ ಪಕ್ಷ ಸಂಘಟನೆಗೆ ಹಿನ್ನಡೆ
## ಹೈಕಮಾಂಡ್ ಮಧ್ಯಪ್ರವೇಶಿಸಿ ಬಣರಾಜಕೀಯಕ್ಕೆ ಬ್ರೇಕ್‌ಹಾಕಲು ಕುಂದಲಗುರ್ಕಿ ಮುನೀಂದ್ರ ಆಗ್ರಹ



ಶಿಡ್ಲಘಟ್ಟ: ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್‌ನಲ್ಲಿ ಬಣಗಳ ರಾಜಕೀಯದಿಂದ ಪಕ್ಷ ಸಂಘಟನೆ ಕ್ಷೀಣಿಸುತ್ತಿದೆಯಲ್ಲದೆ ಕಾರ್ಯಕರ್ತರು ಗೊಂದಲಕ್ಕೆ ಒಳಗಾಗಿದ್ದಾರೆ. ಕೂಡಲೆ ಹೈ ಕಮಾಂಡ್ ಮಧ್ಯಪ್ರವೇಶಿಸಿ ಬಣ ರಾಜಕೀಯ ಸಮಸ್ಯೆಯನ್ನು ಬಗೆಹರಿಸುವಂತೆ ಐಎನ್‌ಟಿಯುಸಿ ರಾಜ್ಯ ಸಂಘಟನಾ ಕಾರ್ಯದರ್ಶಿ ಕುಂದಲಗುರ್ಕಿ ಮುನೀಂದ್ರ ಆಗ್ರಹಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಆಗ್ನೇಯ ಪದವೀಧರ ಕ್ಷೇತ್ರ, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಚುನಾವಣೆಗೆ ಸಜ್ಜಾಗುತ್ತಿದ್ದರೆ ನಮ್ಮಲ್ಲಿ ಮಾತ್ರ ಬಣ ರಾಜಕೀಯದಿಂದ ಯಾರ ಬಣದಲ್ಲಿ ಗುರ್ತಿಸಿಕೊಳ್ಳುವುದು ಎಂಬ ಗೊಂದಲದಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಇರುವಂತಾಗಿದೆ ಎಂದು ದೂರಿದರು.

ತಾಲೂಕಿನಲ್ಲಿ ಕಾಂಗ್ರೆಸ್ ಪಕ್ಷ ಭದ್ರವಾಗಿದೆ. ಕಾರ್ಯಕರ್ತರೂ ಇದ್ದಾರೆ. ಆದರೆ ಬಣಗಳ ರಾಜಕಾರಣ ದಿಂದ ಕಾರ್ಯಕರ್ತರು ಗೊಂದಲಕ್ಕೆ ಒಳಗಾಗಿದಿದ್ದು ಇತ್ತೀಚೆಗೆ ನಡೆದ ಹಲವು ಚುನಾವಣೆಗಳಲ್ಲಿ ಪಕ್ಷಕ್ಕೆ ಸೋಲುಂಟಾಗಿದೆ. ಇದಕ್ಕೆ ವಿರೋಧ ಪಕ್ಷ ಕಾರಣವಲ್ಲ ನಮ್ಮಲ್ಲಿನ ಗೊಂದಲಗಳೆ ಕಾರಣ ಎಂದು ಬೇಸರ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷದ ಅಕಾರಕ್ಕೆ ಬಂದು ಮೂರು ವರ್ಷಗಳಾಗಿದ್ದರೂ ನಾಮ ನಿರ್ದೇಶನಗಳು ಆಗಿಲ್ಲ. ಪಕ್ಷಕ್ಕೆ ದುಡಿದ ಕಾರ್ಯಕರ್ತರಿಗೆ ಸೂಕ್ತ ಮಾನ್ಯತೆ ದೊರೆತಿಲ್ಲ. ಇದರಿಂದ ಪಕ್ಷ ಸಂಘಟನೆಗೆ ಹಿನ್ನಡೆಯಾಗಿದೆ ಎಂದು ದೂರಿ ಹೈ ಕಮಾಂಡ್ ಕೂಡಲೆ ಮಧ್ಯಪ್ರವೇಶ ಮಾಡಿ ಎರಡೂ ಬಣದ ಮುಖಂಡರನ್ನು ಕರೆಸಿ ಮಾತನಾಡಿ ಒಂದುಗೂಡಿಸುವ ಕೆಲಸ ಆಗಬೇಕು ಎಂದು ಕೋರಿದರು.

# ವಿಪತ್ತು ನಿರ್ವಹಣೆ ಕುರಿತು ವಿದ್ಯಾರ್ಥಿಗಳಿಗೆ ಜಾಗೃತಿ



**ಸ್ಕಂದಗಿರಿ ವಾಣಿ ಸುದ್ದಿಜಾಲ**
**ಬಾಗೇಪಲ್ಲಿ :** ಮೈ ಭಾರತ್ ಚಿಕ್ಕಬಳ್ಳಾಪುರ ವತಿಯಿಂದ ಅಂತರರಾಷ್ಟ್ರೀಯ ವಿಪತ್ತು ಅಪಾಯ ಕಡಿತ ದಿನದ ಅಂಗವಾಗಿ ಬಾಗೇಪಲ್ಲಿಯ ಸರ್ಕಾರಿ ಐಟಿಐ ಕಾಲೇಜಿನಲ್ಲಿ ಮಂಗಳವಾರ ವಿಪತ್ತು ನಿರ್ವಹಣೆ ಕುರಿತು ವಿಶೇಷ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ನೈಸರ್ಗಿಕ ವಿಕೋಪಗಳು ಹಾಗೂ ಮಾನವ ನಿರ್ಮಿತ ವಿಪತ್ತುಗಳ ಸ್ವರೂಪ, ಅವುಗಳಿಂದ ಉಂಟಾಗುವ ಅಪಾಯಗಳು ಮತ್ತು ಅವುಗಳನ್ನು ಎದುರಿಸಲು ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಯಿತು. ವಿಪತ್ತು ಸಂಭವಿಸಿದ ಸಂದರ್ಭದಲ್ಲಿ ಜೀವಹಾನಿ ಮತ್ತು ಆಸ್ತಿಪಾಸ್ತಿ ನಷ್ಟವನ್ನು ತಡೆಗಟ್ಟುವ ವಿಧಾನಗಳು, ತುರ್ತು ಸಂದರ್ಭಗಳಲ್ಲಿ ವಹಿಸಬೇಕಾದ ಸುರಕ್ಷತಾ ಕ್ರಮಗಳು ಹಾಗೂ ವಿಪತ್ತಿನ ನಂತರ ಕೈಗೊಳ್ಳಬೇಕಾದ ಪರಿಹಾರ ಮತ್ತು ಪುನರ್ವಸತಿ ಕಾರ್ಯಗಳ ಕುರಿತು ವಿವರಿಸಲಾಯಿತು. ವಿಪತ್ತು ನಿರ್ವಹಣೆಯಲ್ಲಿ ಮುನ್ನೆಚ್ಚರಿಕೆ, ಸಮಯೋಚಿತ ಕ್ರಮ ಹಾಗೂ ಸಾರ್ವಜನಿಕರ

ಸಹಕಾರ ಅತ್ಯಂತ ಮುಖ್ಯವಾಗಿದ್ದು, ಯುವಜನರು ಈ ಕುರಿತು ಅರಿವು ಬೆಳೆಸಿಕೊಂಡು ಸಮಾಜದಲ್ಲಿ ಜಾಗೃತಿ ಮೂಡಿಸುವ ಜವಾಬ್ದಾರಿಯನ್ನು ವಹಿಸಬೇಕು ಎಂದು ಕರೆ ನೀಡಲಾಯಿತು. ಕಾರ್ಯಕ್ರಮದಲ್ಲಿ ಮೈ ಭಾರತ್ ಚಿಕ್ಕಬಳ್ಳಾಪುರ ಜಿಲ್ಲಾ ಯುವಜನ ಅಧಿಕಾರಿ ಎ. ಮಹೇಂದ್ರ ರೆಡ್ಡಿ, ಕಾಲೇಜಿನ ಪ್ರಾಂಶುಪಾಲರಾದ ಮಂಜುನಾಥ ಗೌಡ, ತಾಲೂಕು ಅಗ್ನಿಶಾಮಕ ಅಧಿಕಾರಿ ಲಕ್ಷ್ಮಣ್ ಹಾಗೂ ಅಗ್ನಿಶಾಮಕ ಇಲಾಖೆಯ ಪ್ರತಿನಿಧಿ ಬಾಲಪ್ಪ, ಕಾಲೇಜಿನ ಬೋಧಕ ಸಿಬ್ಬಂದಿ ಹಾಗೂ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ಪಶು ಆಹಾರದ ಗುಣಮಟ್ಟದ ಬಗ್ಗೆ ರೈತರ ಆಕ್ರೋಶ
# ಹಾಲು ಒಕ್ಕೂಟದ ವಿರುದ್ಧ ಪ್ರತಿಭಟನೆ

**ಸ್ಕಂದಗಿರಿ ವಾಣಿ ಸುದ್ದಿಜಾಲ**
**ಗೌರಿಬಿದನೂರು:** ಕಲ್ಲೂಡಿ ಹಾಲು ಉತ್ಪಾದಕರ ಸಹಕಾರ ಸಂಘದ ಮೂಲಕ ಚಿಕ್ಕಬಳ್ಳಾಪುರ ಹಾಲು ಒಕ್ಕೂಟ ಸರಬರಾಜು ಮಾಡುವ ಪಶು ಆಹಾರದಲ್ಲಿ ಗುಣಮಟ್ಟವಿಲ್ಲ ಎಂದು ಆರೋಪಿಸಿ ಹಾಲು ಉತ್ಪಾದಕ ರೈತರು ಪ್ರತಿಭಟನೆ ನಡೆಸಿದರು.

50 ಕೆ.ಜಿ. ಪಶು ಆಹಾರದ ಚೀಲದಲ್ಲಿ ನೀರಿನಲ್ಲಿ ಕರಗದ ಕಲ್ಲಿನ ಪುಡಿ, ಮಣ್ಣಿನ ಮಾದರಿಯ ಪದಾರ್ಥ ಪತ್ತೆಯಾಗಿದೆ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು. ಪಶು ಆಹಾರವನ್ನು ನೀರಿನಲ್ಲಿ ಹಾಕಿದರೆ ಕರಗುತ್ತಿಲ್ಲ.

ಇದು ಎಂ-ಸ್ಯಾಂಡ್ ಮಿಶ್ರಣ ಮಾಡಿದಂತೆ ಕಾಣುತ್ತಿದೆ. ಇದನ್ನೇ ನಾವು ಪಶುಗಳಿಗೆ ನೀಡುತ್ತಿದ್ದೇವೆ. ಇದರಿಂದ ಪಶುಗಳ ಆರೋಗ್ಯ ಏನಾಗಬೇಕು. ಹಾಲಿನ ಗುಣಮಟ್ಟ ಕುಸಿಯುತ್ತದೆ.

ಸರ್ಕಾರಿ ಸ್ವಾಮ್ಯದ ಒಕ್ಕೂಟವಾದ್ದರಿಂದ ಉತ್ತಮ ಗುಣಮಟ್ಟದ ಆಹಾರ ಸರಬರಾಜು ಮಾಡುತ್ತಾರೆ ಎಂಬ ವಿಶ್ವಾಸದಿಂದ ನಾವು ಪಶು ಆಹಾರ ಖರೀದಿಸಿ, ಒಕ್ಕೂಟಕ್ಕೆ ಹಾಲು ಹಾಕುತ್ತಿದ್ದೇವೆ ಎಂದು ರೈತರು ತಮ್ಮ ನೋವು, ಅಳಲು ತೋಡಿಕೊಂಡರು.

ವಿಷಯ ತಿಳಿದ ಕೂಡಲೇ ಕಲ್ಲೂಡಿ ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿಗಳು ಚಿಕ್ಕಬಳ್ಳಾಪುರ ಹಾಲು ಒಕ್ಕೂಟದ ಗೌರಿಬಿದನೂರು ತಾಲೂಕು ವ್ಯವಸ್ಥಾಪಕ ಡಾ. ನರೇಂದ್ರ ಬೂದಿಹಾಳ್ ರವರಿಗೆ ಮಾಹಿತಿ ನೀಡಿದರು. ಕೂಡಲೇ ಸ್ಥಳಕ್ಕೆ ಆಗಮಿಸಿದ ಡಾ. ಬೂದಿಹಾಳ್ ಅವರು ರೈತರ ಅಹವಾಲು ಆಲಿಸಿದರು. ರೈತರ ಸಮ್ಮುಖದಲ್ಲೇ ಪ್ರಾತ್ಯಕ್ಷಿಕವಾಗಿ 50 ಮೂಟೆ ಪಶು ಆಹಾರವನ್ನು ಪರೀಕ್ಷೆಗೆ ಒಳಪಡಿಸಿದಾಗ, ಒಕ್ಕೂಟದ ಪಶು ಆಹಾರದಲ್ಲಿದ್ದ ಕಲ್ಲಿನ ಪುಡಿ ಮಾದರಿಯ ಪದಾರ್ಥ ನೀರಿನಲ್ಲಿ ಕರಗಿತು. ಆದರೆ ರೈತರು ತಂದಿದ್ದ ಎಂ-ಸ್ಯಾಂಡ್ ಗೆ ರಾಸಾಯನಿಕ ಸಿಂಪಡಿಸಿದಾಗ ಅದು ಕರಗಲಿಲ್ಲ.

ಈ ವೇಳೆ ಮಾತನಾಡಿದ ಡಾ. ಬೂದಿಹಾಳ್ ಅವರು ರೈತರಿಗೆ ಭರವಸೆ ನೀಡಿ, ಪಶು ಆಹಾರದಲ್ಲಿ ಯಾವುದೇ ಗುಣಮಟ್ಟದ ಕೊರತೆ ಇರುವುದಿಲ್ಲ. ಈ ಬಗ್ಗೆ ಸಂದೇಹ ಬೇಡ. ಇದನ್ನು ಪ್ರಯೋಗಾಲಯ ಪರೀಕ್ಷೆಗೆ ಒಳಪಡಿಸುತ್ತೇವೆ. ಜೊತೆಗೆ ರೈತರಲ್ಲಿರುವ ಪಶು ಆಹಾರವನ್ನು ಬದಲಾಯಿಸಿಕೊಡುತ್ತೇವೆ ಎಂದು ಹೇಳಿದರು.

ಪಶು ಆಹಾರ ತಯಾರಿಕೆಯಲ್ಲಿ ಅಕ್ಕಿ ತೌಡು, ಜೋಳ, ನವಣೆ ಸೇರಿದಂತೆ ಇನ್ನಿತರ ಪೌಷ್ಟಿಕ ಆಹಾರ ಪದಾರ್ಥಗಳನ್ನು ಬಳಸಲಾಗುತ್ತದೆ. ಕೋಟ್ಯಂತರ ರೂಪಾಯಿ ವೆಚ್ಚದ ಅತ್ಯಾಧುನಿಕ ಮಿಷನರಿಗಳು ಕಾರ್ಯನಿರ್ವಹಿಸುತ್ತಿದ್ದು, ಇದುವರೆಗೂ ಯಾವುದೇ ರೀತಿಯ ದೂರುಗಳು ಬಂದಿಲ್ಲ. ಆದರೂ ಇದನ್ನು ಗಂಭೀರವಾಗಿ ಪರಿಗಣಿಸಿ ತನಿಖೆ ನಡೆಸಲಾಗುವುದು ಎಂದರು.

ರೈತರು ಆದಷ್ಟು ಒಣ ಮೇವನ್ನು ಪಶುಗಳಿಗೆ ನೀಡಬೇಕು, ಇದರಿಂದ ಹಾಲಿನ ಉತ್ಪಾದನೆಯೂ ಹೆಚ್ಚಾಗುತ್ತದೆ ಎಂದು ಅವರು ಸಲಹೆ ನೀಡಿದರು.

ಹಾಲು ಉತ್ಪಾದಕರಾದ ರಾಮಕೃಷ್ಣಪ್ಪ, ನಾಗರಾಜ್, ಲೋಕೇಶ್, ಪ್ರಸನ್ನಕುಮಾರ್, ಶಿವಕುಮಾರ್, ಯರ್ರಪ್ಪ, ಮಲ್ಲಪ್ಪ, ಗಂಗಮ್ಮ, ಮಹೇಶ್, ಸುಹಾಸ್, ನರಸೇಗೌಡ, ಹಾಜರಿದ್ದರು.

# ಇಬ್ಬರು ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ ಆಯ್ಕೆ



**ಸ್ಕಂದಗಿರಿ ವಾಣಿ ಸುದ್ದಿಜಾಲ**
**ಭಾಗ್ಯನಗರ:** ಜಿಲ್ಲಾಮಟ್ಟದ ಚೆಸ್ ಪಂದ್ಯಾವಳಿಯಲ್ಲಿ ಯಂಗ್ ಇಂಡಿಯಾ ಶಾಲೆಯ ಇಬ್ಬರು ವಿದ್ಯಾರ್ಥಿಗಳ ಉತ್ತಮ ಸಾಧನೆ ಮಾಡಿ ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ಜಿಲ್ಲಾ ಮಟ್ಟದ ಚೆಸ್ ಪಂದ್ಯಾವಳಿಯಲ್ಲಿ ಯಂಗ್ ಇಂಡಿಯಾ ಶಾಲೆಯ ಅಂಡರ್-17 ವಿಭಾಗದಲ್ಲಿ ಕಾರ್ತಿಕೇಯ ಡಿ.ಎನ್ ಹಾಗೂ ಅಂಡರ್-14 ವಿಭಾಗದಲ್ಲಿ ಆರ್.ವಿ.ವೇದಾಂಕರೆಡ್ಡಿ

ಉತ್ತಮಪ್ರದರ್ಶನ ನೀಡಿ ರಾಜ್ಯ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ಈ ಸಂದರ್ಭದಲ್ಲಿ ಶಾಲೆಯ ಸಂಸ್ಥಾಪಕ ಪ್ರೊ. ಡಿ.ಶಿವಣ್ಣ, ಸಿಇಒ ಅರ್ಜುನ್, ಮುಖ್ಯಶಿಕ್ಷಕಿ ರುಕ್ಮಿಣಿ, ದೈಹಿಕ ಶಿಕ್ಷಣ ಶಿಕ್ಷಕರಾದ ಅಮರನಾಥ್. ಮತ್ತು ರಾಮಾಂಜಿನಪ್ಪ ಟಿ. ನ್ಯಾಷನಲ್ ಕಾಲೇಜು ಗ್ರಂಥಪಾಲಕರು ಹಾಗೂ ತರಬೇತುದಾರರಾದ ಜಯರಾಮರೆಡ್ಡಿ ಟಿ.ಎನ್. ಮತ್ತು ಪಿ.ಎಂ.ಶ್ರೀಶಾಲೆ, ಬಾಗೇಪಲ್ಲಿಯ ವಿಜ್ಞಾನ ಶಿಕ್ಷಕಿ ಶ್ರೀಮತಿ ಭಾರ್ಗವಿ ಕೆ.ಜೆ. ಉಪಸ್ಥಿತರಿದ್ದು ವಿದ್ಯಾರ್ಥಿಗಳ ಸಾಧನೆಯನ್ನು ಶ್ಲಾಘಿಸಿದರು.



**ಭಾಗ್ಯನಗರ: ಪಟ್ಟಣದ ಬಿಜಿಎಸ್ ಪಬ್ಲಿಕ್ ಶಾಲೆಯ 9ನೇ ತರಗತಿಯ ವಿದ್ಯಾರ್ಥಿ ನೀಲಕಂಠ್, 17 ವರ್ಷದೊಳಗಿನವರ ಜಿಲ್ಲಾ ಮಟ್ಟದ ಚೆಸ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾನೆ. ಚೆಸ್ ಸ್ಪರ್ಧೆಯಲ್ಲಿ ಅತ್ಯುತ್ತಮ ಪ್ರದರ್ಶನ ನೀಡುವ ಮೂಲಕ ಶಾಲೆಗೆ ಕೀರ್ತಿ ತಂದಿರುವ ನೀಲಕಂಠ್‌ನ ಸಾಧನೆಗೆ ಶಾಲೆಯ ಆಡಳಿತ ಮಂಡಳಿ, ಮುಖ್ಯೋಪಾಧ್ಯಾಯರು ಹಾಗೂ ಬೋಧಕರು ಮತ್ತು ಸಿಬ್ಬಂದಿ ಅಭಿನಂದನೆ ಸಲ್ಲಿಸಿದ್ದಾರೆ.**

# ಸೋಮಘಟ್ಟ ನರಸಿಂಹಸ್ವಾಮಿ ದೇವಾಲಯಕ್ಕೆ ಭಾಗ್ಯನಗರ ಭಕ್ತರ ಪಾದಯಾತ್ರೆ



**ಸ್ಕಂದಗಿರಿ ವಾಣಿ ಸುದ್ದಿಜಾಲ**
**ಭಾಗ್ಯನಗರ:** ಸನಾತನ ಧರ್ಮದ ಸಂಕೇತಗಳೇ ಪೂರ್ವಿಕರು ನಿರ್ಮಿಸಿದ ದೇವಾಲಯಗಳು ಯಾವುದೇ ಕಷ್ಟ ಬಂದರೂ ಮೊದಲು ಮೊರೆಹೋಗುವುದು ದೇವರಲ್ಲಿ ಈ ಬಾರಿ ಮುಂಗಾರು ಹಿಂಗಾರು ಮಳೆ ಕೈಕೊಟ್ಟ ಕಾರಣ ನೀರಿನ ಅಭಾವ ತಲೆ ದೂರಿದೆ ಭಗವಂತನ ಕೃಪೆಯಿಂದ ಮುಂದಿನ ದಿನಗಳಲ್ಲಾದರೂ ಒಳ್ಳೆಯ ಮಳೆಯಾಗಿ ಸಮೃದ್ಧಿಯಾಗಲೆಂದು ಸೋಮಘಟ್ಟ ಶ್ರೀಲಕ್ಷ್ಮಿ ನರಸಿಂಹ ಸ್ವಾಮಿ ದೇವರಲ್ಲಿ ಪಾದಯಾತ್ರೆ ನಡೆಸಿದ ಭಕ್ತರು ಪ್ರಾರ್ಥಿಸಿದರು.

ಪ್ರತಿ ವರ್ಷದಂತೆ ಬಾಗೇಪಲ್ಲಿ ಇಂದ ಸೋಮಘಟ್ಟ ಶ್ರೀಲಕ್ಷ್ಮೀ ನರಸಿಂಹ ಸ್ವಾಮಿ ದೇವಾಲಯಕ್ಕೆ ಪಾದಯಾತ್ರೆ ಕೈಗೊಂಡರು ಪಟ್ಟಣದ ಶ್ರೀ ಲಕ್ಷ್ಮಿ ನರಸಿಂಹಸ್ವಾಮಿ ದೇವಾಲಯದಲ್ಲಿ ಬೆಳಗಿನ ಜಾವ 5:00 ಗಂಟೆಗೆ ಪೂಜೆ ಸಲ್ಲಿಸಿ ಭಜನೆ ಮಾಡುತ್ತ ಸುಮಾರು 90 ಮಂದಿ ಭಕ್ತರು ಆಂಧ್ರಪ್ರದೇಶದ ಕೊಡಿಕೊಂಡ ಮಾರ್ಗವಾಗಿ ಸೋಮುಘಟ್ಟ ಅಲ್ಲಿಂದ ಸುಮಾರು 2 ಕಿಮೀ. ದೂರದಲ್ಲಿರುವ ಬೆಟ್ಟದಲ್ಲಿ ಸ್ವಯಂಭು ಲಕ್ಷ್ಮೀ ನರಸಿಂಹ ಸ್ವಾಮಿ ನೆಲೆಸಿದ್ದಾರೆ, ಅಲ್ಲಿಗೆ ಸೇರಿದ ಭಕ್ತರು ಅಭಿಷೇಕ ಪೂಜೆ ಕೈಂಕರಗಳನ್ನ ನೆರವೇರಿಸಿ ಸ್ವಾಮಿ ಕೃಪೆಗೆ ಪಾತ್ರರಾದರು.

ಮಳೆಯ ಅಭಾವದ ಕಾರಣ ರೈತರು ಕೃಷಿ ಕಾರ್ಮಿಕರು ಕೂಲಿ ಕಾರ್ಮಿಕರು ಕಂಗಾಲಾಗಿದ್ದಾರೆ, ಮನುಷ್ಯನ ಜೀವನದಲ್ಲಿ ಅತಿ ಮುಖ್ಯವಾಗಿರುವುದು ನೀರು. ಈ ಬಾರಿ ನೀರಿನ ಸಮಸ್ಯೆ ಎದುರಾಗಲಿದೆ

ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ಕೃಪಾಕಟಾಕ್ಷದಿಂದ ಮುಂದಿನ ದಿನಗಳಲ್ಲಾದರೂ ಒಳ್ಳೆಯ ಮಳೆ ಆಗಲಿ ಎಂದು ಆ ಭಗವಂತನಲ್ಲಿ ಸಾಮೂಹಿಕವಾಗಿ ಪ್ರಾರ್ಥಿಸಿದರು.

ದೇವಾಲಯದ ಧರ್ಮದರ್ಶಿ ರಾಮಾಂಜನೇಯಲು ಮಾತನಾಡಿ ಇಲ್ಲಿಗೆ ಬರುವ ಭಕ್ತರಿಗೆ ಎಲ್ಲಾ ರೀತಿಯ ಸೌಲಭ್ಯಗಳನ್ನು ಒದಗಿಸಲಾಗಿದೆ ಮುಂದಿನ ದಿನಗಳಲ್ಲಿ ಇಲ್ಲಿ ತಿರುಮಲ ತಿರುಪತಿ ದೇವಸ್ಥಾನದ ವತಿಯಿಂದ ಕಲ್ಯಾಣ ಮಂಟಪ ನಿರ್ಮಾಣವಾಗಲಿದೆ, ಈ ಭಾಗಕ್ಕೆ ಇದೊಂದು ವರದಾನವಾಗಿದೆ ಭಕ್ತರ ಅಭಿಷ್ಟಗಳನ್ನು ನೆರವೇರಿಸುವ ಶ್ರೀ ಲಕ್ಷ್ಮೀ ನರಸಿಂಹ ಸ್ವಾಮಿ ಸ್ವಯಂಭು ವಾಗಿ ನೆಲೆಸಿರುವ ಪವಿತ್ರವಾದ ಸ್ಥಾನ ಎಂದರು.

ಈ ಸಂದರ್ಭದಲ್ಲಿ ವಾಚ್ ವೆಂಕಟೇಶ್, ಮಂಜುನಾಥ್, ಕೆಇಬಿ ನವೀನ್. ಹಂಸಂದ್ರ ಸುಧಾಕರ್. ಮಂಜುನಾಥ್. ಸ್ಟುಡಿಯೋ ರವಿ. ರಾಮಚಂದ್ರ. ಯೂಟ್ಯೂಬ್ ವೀರೇಂದ್ರ. ಸಂಜೀವಪ್ಪ. ವಿಜಯಮ್ಮ. ಯೋಗ ಗುರು ರಘುನಾಥ್ ರೆಡ್ಡಿ. ಶಿಕ್ಷಕ ಸುಧಾಕರ್. ಶಿಕ್ಷಕ ಆದಿ ನಾರಾಯಣ. ಸೇರಿದಂತೆ ಎಲ್ಲಾ ಭಕ್ತಾ ವೃಂದದವರು ಪಾದಯಾತ್ರೆಯಲ್ಲಿ ಭಾಗವಹಿಸಿದ್ದರು.

# ಮಹಾಜನ್ ವರದಿ ಯಥಾವತ್ ಜಾರಿಯಾಗಲಿ-ಸಾಹಿತಿ ಪ್ರಮೀಳ ಮಹಾದೇವ್

**ಸ್ಕಂದಗಿರಿ ವಾಣಿ ಸುದ್ದಿಜಾಲ**
**ಚಿಕ್ಕಬಳ್ಳಾಪುರ:** ಒಕ್ಕೂಟ ವ್ಯವಸ್ಥೆಯಲ್ಲಿ ಸಾಮರಸ್ಯ ಮೂಡಲು ಮಹಾಜನ್ ವರದಿಯೊಂದೇ ಪರಿಹಾರ ಎಂದು ಜಿಲ್ಲಾ ರಾಜ್ಯೋತ್ಸವ ಪುರಸ್ಕೃತ ಸಾಹಿತಿ ಹಾಗೂ ಅಧ್ಯಾಪಕಿ ಪ್ರಮೀಳ ಮಹಾದೇವ್ ತಿಳಿಸಿದರು.




ತಾಲೂಕು ಕಸಾಪದಿಂದ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಮಹಾಜನ್ ವರದಿ ಒಂದು ಅವಲೋಕನ ಕಾರ್ಯಕ್ರಮದಲ್ಲಿ ಮಾತನಾಡಿ, ಸ್ವಾತಂತ್ರ್ಯ ನಂತರದ ಭಾರತದಲ್ಲಿದ್ದ ಹಲವಾರು ಸಮಸ್ಯೆಗಳ ಭಾಷಾವಾರು ರಾಜ್ಯಗಳ ರಚನೆಯಿಂದ ಒಕ್ಕೂಟ ವ್ಯವಸ್ಥೆಯಲ್ಲಿ ಹೊಸ ಸಮಸ್ಯೆಗೆ ನಾಂದಿಯಾಗಬಹುದೆಂಬ ಆತಂಕ ಕಾಡಿತ್ತು. ವಿಂಗಡಣೆಯಾದಲ್ಲಿ ಉದ್ಭವಿಸಬಹುದಾದ ಪರಿಣಾಮಗಳ ಕುರಿತು ಅಧ್ಯಯನ ಮಾಡಲು ನಿವೃತ್ತ ನ್ಯಾಯಮೂರ್ತಿ ಎಸ್.ಕೆ.ಧಾರ್ ಆಯೋಗ ರಚಿಸಲಾಯಿತು.

ಈ ಸಮಿತಿಯು, ಭಾಷಾವಾರು ರಾಜ್ಯಗಳ ರಚನೆಯು ಸಮಂಜಸವಾದುದಲ್ಲ ಎಂದು ವರದಿ ನೀಡಿತು. ನಂತರ ನೆಹರು ನೇತೃತ್ವದಲ್ಲಿ ಸರ್ಧಾರ್ ವಲ್ಲಭಭಾಯಿ ಪಟೇಲ್ ಮತ್ತು ಪಟ್ಟಾಭಿ ರಾಮಯ್ಯ ಒಳಗೊಂಡ ಜೆ.ವಿ.ಪಿ ಸಮಿತಿ ರಚಿಸಲಾಯಿತು, ಇದೂ ಸಹಾ ರಾಜ್ಯಾವಾರು ರಚನೆಗೆ ಒಪ್ಪಿಗೆ ನೀಡಲಿಲ್ಲ. 1953ರಲ್ಲಿ ಆಂದ್ರ ಪ್ರದೇಶದ ಹೋರಾಟಗಾರರಾದ ಪೊಟ್ಟಿ ಶ್ರೀರಾಮುಲು ಅವರು ಉಪವಾಸ ಸತ್ಯಾಗ್ರಹ ಮಾಡಿ ಮರಣ ಹೊಂದಿದ ಪರಿಣಾಮವಾಗಿ ದೇಶಾಧ್ಯಂತ ಭಾಷಾವಾರು ರಾಜ್ಯಗಳ ರಚನೆಯ ಕಿಚ್ಚು ಹೆಚ್ಚಾಯಿತು. ಇದರ ಅಂಗವಾಗಿ ಆಂಧ್ರಪ್ರದೇಶ ರಾಜ್ಯ ರಚನೆಯಾಗಿ, ಭಾರತದ ಮೊದಲ ಭಾಷಾವಾರು ರಾಜ್ಯ ರಚನೆಗೆ ನಾಂದಿಯಾಯಿತು.

ಅದರ ನಂತರ 1953ರಲ್ಲಿ ಫಜಲ್ ಅಲಿ ಅವರ ನೇತೃತ್ವದಲ್ಲಿ ಭಾಷಾವಾರು ರಾಜ್ಯಗಳ ರಚನೆ ಭಾಷಾವಾರು ವಿಂಗಡಣ ಆಯೋಗ ರಚನೆ ಮಾಡಲಾಯಿತು. ಇದರ ವರದಿಯನ್ವಯ 1956 ನವೆಂಬರ್ 1 ರಂದು ಕರ್ನಾಟಕವೂ ಸೇರಿದಂತೆ 14 ರಾಜ್ಯಗಳು ಮತ್ತು 6 ಕೇಂದ್ರಾಡಳಿತ ರಾಜ್ಯಗಳ ಉದಯವಾಯಿತು. ಮೈಸೂರು. ಮಹಾರಾಷ್ಟ್ರ, ಕೇರಳ ರಾಜ್ಯಗಳ ನಡುವೆ ಗಡಿ ತಗಾದೆಗಳು ಭುಗಿಲೆದ್ದ ಸಂದರ್ಭದಲ್ಲಿ ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯ ಮೂರ್ತಿ ಮೇಹರ್ ಚಂದ್ ಮಹಾಜನ್ ಅವರ ಅಧ್ಯಕ್ಷತೆಯಲಿ ಮಹಾಜನ್ ಆಯೋಗವು ಅಕ್ಟೋಬರ್ 25 1966ರಲ್ಲಿ ಅನುಷ್ಠಾನಕ್ಕೆ ತಂದು, ಆಯೋಗದಿಂದ ಆಗಸ್ಟ್1967ರಲ್ಲಿ ವರದಿ ಮಂಡಿಸಲಾಯಿತು.

ವರದಿಯನ್ವಯ ಬೆಳಗಾವಿ, ಕಾರವಾರ, ಕೇರಳದ ಕಾಸರಗೋಡು ಸೇರಿದಂತೆ ಮಹಾರಾಷ್ಟ್ರದ ಸೊಲ್ಲಾಪುರ, ಇಡೀ ಅಕ್ಕಲಕೋಟೆ ತಾಲೂಕು ಜತ್ತ ತಾಲೂಕಿನ 44 ಹಳ್ಳಿಗಳು ಗಡ ಹಿಂಗ್ಲಜ ತಾಲೂಕು 15 ಹಳ್ಳಿಗಳು ಕರ್ನಾಟಕಕ್ಕೆ ಸೇರಬೇಕು ಅದೇ ರೀತಿ, ನಿಪ್ಪಾಣಿ, ಖಾನಾಪುರ ಬೆಳಗಾವಿ ಹುಕ್ಕೇರಿ ತಾಲೂಕುಗಳ ಮಾರಾಠಿ ಭಾಷಿಕರು ಅಧಿಕವಿರುವ 264 ಹಳ್ಳಿಗಳನ್ನು ಮಹಾರಾಷ್ಟ್ರಕ್ಕೆ ಸೇರಬೇಕೆಂದು ವರದಿ ನೀಡಿತು. ಕರ್ನಾಟಕ ವರದಿ ಸ್ವಾಗತಿಸಿದರೆ, ಮೊದಲು ಒಪ್ಪಿದ್ದ ಮಹಾರಾಷ್ಟ್ರ ರಾಜ್ಯವು ವರದಿಯನ್ನು ವಿರೋಧಿಸಿತು.

ಅಲ್ಲಿಂದ ಇಲ್ಲಿವರೆಗೂ ಈ ಗಡಿ ವಿವಾದ ಒಂದು ತಾರ್ಕಿಕ ಅಂತ್ಯವನ್ನು ಕಾಣದೆ ಸದ್ಯ ಈಗ ವಿಷಯವು ಸರ್ವೋಚ್ಚ ನ್ಯಾಯಾಲಯದಲ್ಲಿದ್ದು ತೀರ್ಪಿಗಾಗಿ ಕಾಯಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾಧ್ಯಕ್ಷ ಡಾ.ಕೋಡಿರಂಗಪ್ಪ ಮಾತನಾಡಿ, ಭಾಷಾವಾರು ಪ್ರಾಂತ್ಯ ರಚನೆಗೊಂಡಲ್ಲಿ ಒಕ್ಕೂಟ ವ್ಯವಸ್ಥೆಗೆ ಧಕ್ಕೆ ಬರಬಹುದೆಂಬ ಕಾರಣಕ್ಕೆ ನೆಹರು, ವಲ್ಲಬಾಯಿ ಪಟೇಲರು ಪ್ರತ್ಯೇಕ ರಾಜ್ಯ ರಚನೆಗೆ ಹಿಂದೇಟು ಹಾಕಿದ್ದರು.ಆದರೆ ಪೊಟ್ಟಿ ಶ್ರೀರಾಮಲು, ಮದ್ರಾಸ್ ಪ್ರಾಂತ್ಯದಿಂದ ತೆಲುಗು ಭಾಷಿಕರಿರುವ ಆಂಧ್ರ ಪ್ರದೇಶವನ್ನು ಪ್ರತ್ಯೇಕ ರಾಜ್ಯ ಮಾಡಲೇ ಬೇಕೆಂದು 56 ದಿನಗಳ ಕಾಲ ಅಮರಾಣಾಂತ ಉಪವಾಸ ಮಾಡಿ ಮರಣ ಹೊಂದಿದರು.ತದನಂತರ ಸಂವಿಧಾನತ್ಮಕವಾಗಿ ಭಾಷಾವಾರು ಪ್ರಾಂತ್ಯಗಳ ರಾಜ್ಯಗಳನ್ನು ರಚನೆ ಮಾಡಲಾಯಿತು. ಮಹಾಜನ್ ವರದಿ ಅನ್ವಯ ಆಂಧ್ರ ಪ್ರದೇಶ, ಮಹಾರಾಷ್ಟ್ರ, ಕೇರಳದ ಹಲವು ಭಾಗಗಳು ಕರ್ನಾಟಕಕ್ಕೆ ಸೇರಬೇಕಿದೆ ಎಂದರು.

ಕಸಾಪ ತಾಲೂಕು ಅಧ್ಯಕ್ಷ ಯಲುವಹಳ್ಳಿ ಸೊಣ್ಣೇಗೌಡ, ಪ್ರಾಂಶುಪಾಲೆ ಡಾ.ವಸುಂಧರಾ, ಕಸಾಪ ತಾಲೂಕು ಕಾರ್ಯದರ್ಶಿ ಕೆ.ಎಂ. ರೆಡ್ಡಪ್ಪ, ಸಹಕಾರ್ಯದರ್ಶಿ ವಿ.ಮಂಜುನಾಥ್, ಜಂಟಿ ಕಾರ್ಯದರ್ಶಿ ಅಣ್ಣಮ್ಮ, ಎ.ಆರ್.ಶಶಿಕಲಾ, ಅಡ್ಡಗಲ್ ಅನಿಲ್, ಸೌಭಾಗ್ಯ, ಎಂ.ವಿ.ಶ್ರೀನಿವಾಸ್, ಉಪನ್ಯಾಸಕರಾದ ವೆಂಕಟ್ರಾಮ್, ಬಿ.ಸದಾಶಿವ, ಕೆ.ಎನ್.ಕೃಷ್ಣಪ್ಪ, ವೆಂಕಟೇಶ್, ಲಿಂಗಪ್ಪ, ಸುನಿತಾ ಇದ್ದರು.

# ರಸ್ತೆಗಳ ಇಕ್ಕೆಲಗಳಲ್ಲಿ ಸ್ವಚ್ಛತಾ ಅಭಿಯಾನ ನಡೆಸಲು

## ವಿಪತ್ತು ನಿರ್ವಹಣಾ ಸಮಿತಿ ಸಭೆಯಲ್ಲಿ ಉಸ್ತುವಾರಿ ಕಾರ್ಯದರ್ಶಿ ಸೂಚನೆ



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಕ್ಕಬಳ್ಳಾಪುರ:** ಜಿಲ್ಲೆಯ ನಗರಗಳನ್ನು ಸಂಪರ್ಕಿಸುವ ರಸ್ತೆಗಳ ಇಕ್ಕೆಲಗಳಲ್ಲಿ ಇರುವ ಪ್ಲಾಸ್ಟಿಕ್ ಹಾಗೂ ಇತರ ತ್ಯಾಜ್ಯವನ್ನು ತೆರವುಗೊಳಿಸಿ ಸ್ವಚ್ಛಗೊಳಿಸಲು ಅಭಿಯಾನದ ರೀತಿಯಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧ್ಯಕ್ಷರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ.ಎನ್.ಮಂಜುಳ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಅವರು ಮಂಗಳವಾರ ಚಿಂತಾಮಣಿ ತಾಲ್ಲೂಕು ಪಂಚಾಯ್ತಿ ಸಭಾಂಗಣದಲ್ಲಿ ನಡೆದ ವಿಪತ್ತು ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು.

ಜಿಲ್ಲೆಯಲ್ಲಿರುವ ಎಲ್ಲಾ ನಗರಾಡಳಿತ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಸ ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕಿದೆ. ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಸ ಸಂಗ್ರಹಣಾ ವಾಹನಗಳ ಕಸ ಸಂಗ್ರಹಣೆಯನ್ನು ಪರಿಣಾಮಕಾರಿಯಾಗಿ ನಿಗಾವಹಿಸಲು ಉಕಖ ವ್ಯವಸ್ಥೆಯನ್ನು ಅಳವಡಿಸಲಾಗಿದೆ, ಆದರೆ ಉಕಖ ವ್ಯವಸ್ಥೆಯನ್ನು ಮೇಲಾಧಿಕಾರಿಗಳು ಪರಿಶೀಲಿಸಿ ಕಸ ವಿಲೇವಾರಿಯನ್ನು ಕರಾರುವಕ್ಕಾಗಿ ನಿರ್ವಹಣೆ ಮಾಡಲು ಕ್ರಮವಹಿಸಬೇಕು. ಮುಖ್ಯವಾಗಿ ನಗರಗಳಲ್ಲಿನ ರಸ್ತೆಗಳ ಇಕ್ಕೆಲಗಳಲ್ಲಿ ಕಸ ವಿಲೇವಾರಿಯನ್ನು ಕಾಲೋಚಿತವಾಗಿ ನಿರ್ಹವಹಿಸಬೇಕೆಂದು ಸೂಚನೆ ನೀಡಿದರು. ಜಿಲ್ಲೆಯಲ್ಲಿ ಈ ವರ್ಷ ಶೇಕಡಾ 51 ರಷ್ಟು ಮಳೆ ಕೊರತೆಯಿಂದಾಗಿ ಜಿಲ್ಲೆಯ 8 ತಾಲ್ಲೂಕುಗಳನ್ನು ತೀವ್ರ ಬರದ ತಾಲ್ಲೂಕುಗಳು ಎಂದು ಸರ್ಕಾರ ಘೋಷಣೆ ಮಾಡಿದೆ. ಪ್ರಸ್ತುತ ಜಿಲ್ಲೆಯ 48 ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಎದುರಾಗಿದೆ. ಮುಂದಿನ ಎರಡು ತಿಂಗಳಲ್ಲಿ ಮಳೆ ಬಾರದಿದ್ದಲ್ಲಿ ಜಿಲ್ಲೆಯ 285 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಲಿದೆ. ಆದ್ದರಿಂದ ಮುನ್ನೆಚ್ಚರಿಕೆ ಕ್ರಮವಾಗಿ ಹೆಚ್ಚಿನ ಸಂಖ್ಯೆಯ ಖಾಸಗಿ ಕೊಳವೆ ಬಾವಿಗಳನ್ನು ಗುರ್ತಿಸಿ ಸಂಬಂಧಪಟ್ಟ ಮಾಲೀಕರ ಸಹಕಾರವನ್ನು ಪಡೆಯಲು ಅಧಿಕಾರಿಗಳು ಸಮನ್ವಯ ಸಾಧಿಸಬೇಕು. ನಗರ ಪ್ರದೇಶ ವ್ಯಾಪ್ತಿಯಲ್ಲಿ ಪ್ರಸ್ತುತ 11 ವಾರ್ಡ್ ಗಳಲ್ಲಿ ಕುಡಿಯುವ

ನೀರಿನ ಸಮಸ್ಯೆಯಿದ್ದು, ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ವಾರ್ಡ್ ಗಳಲ್ಲಿ ಸಮಸ್ಯೆ ಎದುರಾಗಲಿದ್ದು, ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದರು. ಸಭೆಯಲ್ಲಿ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಪಶು ಸಂಗೋಪನಾ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳು ಹಾಗೂ ನಗರ ಸ್ಥಳೀಯ ಆಡಳಿತ ಸಂಸ್ಥೆಗಳ ಪ್ರಗತಿ ಪರಿಶೀಲನೆಯನ್ನು ಉಸ್ತುವಾರಿ ಕಾರ್ಯದರ್ಶಿಗಳು ನಡೆಸಿ ಸಲಹೆ ಸೂಚನೆಗಳನ್ನು ನೀಡಿದರು. ಪ್ರಗತಿ ಪರಿಶೀಲನಾ ಸಭೆಗೂ ಮುನ್ನ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಚಿಂತಾಮಣಿ ತಾಲ್ಲೂಕಿನ ಕೋಟಗಲ್ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ವಸಂತಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಕುಡಿಯುವ ನೀರಿನ ಸಮಸ್ಯೆಯನ್ನು ಆಲಿಸಿದರು. ನಂತರ ಕೆ.ರಾಗುಟ್ಟಹಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ಸೈನ್ಸ್ ಪಾರ್ಕ್ ಅನ್ನು ವೀಕ್ಷಿಸಿದರು, ಬಳಿಕ ಚಿಂತಾಮಣಿ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಸ್ನಾತಕೋತ್ತರ ಕೇಂದ್ರ, ಅಂಬೇಡ್ಕರ್ ಭವನ, ಸರ್ಕಾರಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿ ಅಲ್ಲಿನ ಸ್ಥಿತಿಗತಿಗಳ ಬಗ್ಗೆ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ.ನವೀನ್ ಭಟ್, ಅಪರ ಜಿಲ್ಲಾಧಿಕಾರಿ ಡಾ. ಎನ್.ಭಾಸ್ಕರ್, ಉಪವಿಭಾಗಾಧಿಕಾರಿ ಡಿ.ಹೆಚ್.ಅಶ್ವಿನ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಅತಿಕ್ ಪಾಷ ಸೇರಿ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

# ವಿಧಾನಪರಿಷತ್ ಬಹುತೇಕ ಸದಸ್ಯರು ರೆಸಾರ್ಟ್ ರಾಜಕೀಯಕ್ಕೆ ಸೀಮಿತವಾಗಿದ್ದಾರೆ-ಬರೀದ್



**ಶಿಡ್ಲಘಟ್ಟ :** ಪದವೀಧರರ ಸಮಸ್ಯೆಗಳಿಗೆ ಧ್ವನಿಯಾಗಿ, ಅವರ ಕುಂದುಕೊರತೆಗಳಿಗೆ ಪರಿಹಾರ ಕಲ್ಪಿಸುವ ಉದ್ದೇಶದಿಂದ ಕರ್ನಾಟಕ ಆಗ್ನೇಯ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದು, ಮತದಾರರು ಪಕ್ಷಕ್ಕಿಂತ ಅಭ್ಯರ್ಥಿಯ ವ್ಯಕ್ತಿತ್ವ, ಅನುಭವ ಮತ್ತು ಸೇವಾ ಮನೋಭಾವಕ್ಕೆ ಆದ್ಯತೆ ನೀಡಬೇಕು ಎಂದು ಅಡ್ವೋಕೇಟ್ ಬರೀದ್ ಮನವಿ ಮಾಡಿದರು.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ವಿಧಾನಪರಿಷತ್‌ನ ಆಗ್ನೇಯ ಪದವೀಧರ ಕ್ಷೇತ್ರದ ಸ್ವತಂತ್ರ್ಯ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದೇನೆ. ನಾನು ವಕೀಲನಾಗಿ ಪದವೀಧರರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಅರಿತಿದ್ದೇನೆ. ಅವುಗಳ ಸಮಸ್ಯೆಗೆ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ, ಒಮ್ಮೆ ನನಗೆ ಅವಕಾಶ ಕೊಡಿ ಎಂದು ಕೋರಿದರು.

ಪದವೀಧರರನ್ನು ಮೇಲ್ಮನೆಯಲ್ಲಿ ಪ್ರತಿನಿದಿಸುವವರು ಪದವೀಧರರ ಸಮಸ್ಯೆಗಳ ಕುರಿತು ಪ್ರಶ್ನೆ ಮಾಡಿದ್ದು, ಧ್ವನಿ ಎತ್ತುವುದನ್ನು ಇತ್ತೀಚಿನ ದಿನಗಳಲ್ಲಿ ನಾವು ನೋಡುತ್ತಿಲ್ಲ. ಗೆದ್ದ ಮೇಲೆ ರೆಸಾರ್ಟ್ ರಾಜಕಾರಣಕ್ಕೆ ಸೀಮಿತರಾಗುತ್ತಿದ್ದು ಈ ಬಗ್ಗೆ ಪ್ರಜ್ಞಾವಂತ ಪದವೀಧರ ಮತದಾರರು ಗಂಭೀರವಾಗಿ ಚಿಂತನೆ ಮಾಡಬೇಕಾದ ಸಮಯ ಬಂದಿದೆ ಎಂದರು.

ನಾನು ಸಮಾಜ ಸೇವೆ ಮಾಡಿಲ್ಲ. ಮಾಡಿದ್ದೇನೆ ಎಂದು ಸುಳ್ಳು ಹೇಳುವುದಾಗಲಿ, ಸುಮ್ಮ ಸುಮ್ಮನೆ ಭರವಸೆ ಕೊಡುವುದಾಗಿ ಮಾಡುವುದಿಲ್ಲ. ಬದಲಿಗೆ ಅವಕಾಶ ಕೊಟ್ಟರೆ ಪದವೀಧರರ ಸಮಸ್ಯೆಗಳನ್ನು ನಿವಾರಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ಯುವಕನಾದ ನನಗೆ ಒಮ್ಮೆ ಅವಕಾಶ ಮಾಡಿಕೊಡಿ ಎಂದು ಕೋರಿದರು.

2020ಕ್ಕೆ ಹೋಲಿಸಿದರೆ ಈ ಬಾರಿ 70 ಸಾವಿರಕ್ಕೂ ಹೆಚ್ಚು ಪದವೀಧರರು ಹೆಚ್ಚುವರಿಯಾಗಿ ನೋಂದಣಿಯಾಗಿದ್ದು, ಮತದಾರರ ನೋಂದಣಿ ಕುರಿತು ಅರಿವು ಮೂಡಿಸಲು ಪ್ರಯತ್ನಿಸಿದ್ದೇನೆ ಎಂದರು.

ದಪದವೀಧರರ ಕುಂದುಕೊರತೆ ಪರಿಹಾರಕ್ಕಾಗಿ ಐದು ಜಿಲ್ಲೆಗಳ ಜಿಲ್ಲಾ ಕೇಂದ್ರಗಳಲ್ಲಿ ಪ್ರತ್ಯೇಕ ವೇದಿಕೆ ಸ್ಥಾಪಿಸುವುದು, ಸಾರ್ವಜನಿಕ ಗ್ರಂಥಾಲಯಗಳಿಗೆ ಹೆಚ್ಚಿನ ಅನುದಾನ ತಂದು ಅಭಿವೃದ್ಧಿ ಮತ್ತು ಡಿಜಿಟಲೀಕರಣಗೊಳಿಸುವುದು, ಪದವೀಧರರು ತಮ್ಮ ಸಮಸ್ಯೆಗಳನ್ನು ನೇರವಾಗಿ ದಾಖಲಿಸಲು ಡಿಜಿಟಲ್ ವೆಬ್‌ವೇದಿಕೆ ರೂಪಿಸುವುದು ತಮ್ಮ ಪ್ರಣಾಳಿಕೆಯ ಪ್ರಮುಖ ಅಂಶಗಳಾಗಿವೆ ಎಂದು ಹೇಳಿದರು.

ಶಿಕ್ಷಕರ ವೇತನ ಹಾಗೂ ಸೇವಾ ಸಮಸ್ಯೆಗಳಿಗೆ ಸ್ಪಂದಿಸುವುದು, ನ್ಯಾಯಾಲಯಗಳ ಸಂಕೀರ್ಣಗಳಲ್ಲಿ ವಿದ್ಯುತ್ ಸಮಸ್ಯೆ ತಪ್ಪಿಸಲು ಸೌರ ಫಲಕ ಅಳವಡಿಸಲು ಪ್ರಯತ್ನಿಸುವುದು ಮತ್ತು ಕನ್ನಡ ಮಾಧ್ಯಮದ ವಿದ್ಯಾರ್ಥಿಗಳಿಗೆ ವೈದ್ಯಕೀಯ, ಎಂಜಿನಿಯರಿಂಗ್‌ನಂತಹ ವೃತ್ತಿಪರ ಕೋರ್ಸ್‌ಗಳಲ್ಲಿ ಗುಣಮಟ್ಟದ ಕನ್ನಡ ಪಠ್ಯಪುಸ್ತಕ ಹಾಗೂ ಅಧ್ಯಯನ ಸಾಮಗ್ರಿಗಳನ್ನು ಒದಗಿಸಲು ಕ್ರಮ ಕೈಗೊಳ್ಳುವುದು ತಮ್ಮ ಆರು ಪ್ರಮುಖ ಗುರಿಗಳಾಗಿವೆ ಎಂದು ತಿಳಿಸಿದರು.

ಚುನಾವಣೆಯಲ್ಲಿ ಸ್ಪರ್ಧಿಸಿರುವ ಎಲ್ಲ ಅಭ್ಯರ್ಥಿಗಳನ್ನು ಒಂದೇ ವೇದಿಕೆಗೆ ಆಹ್ವಾನಿಸಿ ಬಹಿರಂಗ ಚರ್ಚೆ ಆಯೋಜಿಸಬೇಕು. ಈ ಹಿಂದೆ ಆಯ್ಕೆಯಾದ ಪ್ರತಿನಿಧಿಗಳು ಪದವೀಧರರಿಗಾಗಿ ಮಾಡಿದ ಕೆಲಸಗಳು ಹಾಗೂ ಅಭ್ಯರ್ಥಿಗಳ ಮುಂದಿನ ಯೋಜನೆಗಳ ಬಗ್ಗೆ ಚರ್ಚೆ ನಡೆದರೆ ಮತದಾರರು ಸೂಕ್ತ ನಿರ್ಧಾರ ಕೈಗೊಳ್ಳಲು ಅನುಕೂಲವಾಗುತ್ತದೆ ಎಂದರು.

ವಕೀಲರಾದ ವಸೀಮ್, ಆದರ್ಶ, ಮುಖಂಡರಾದ ಇನಾಯತ್, ಸರ್ದಾರ್ ಇದ್ದರು.

# ಸತ್ಯಸಾಯಿ ಗ್ರಾಮದಲ್ಲಿ ಕೆರೆಮನೆ ಮೇಳದ ಯಕ್ಷಗಾನ ವೈಭವ

## ಸಂಸ್ಕೃತಿಯೇ ದೇಶದ ಅಸ್ಮಿತೆ ಸದ್ಗುರು ಶ್ರೀ ಮಧುಸೂದನ ಸಾಯಿ



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಕ್ಕಬಳ್ಳಾಪುರ:** ಶರನ್ನವರಾತ್ರಿ ಉತ್ಸವದ ಪವಿತ್ರ ಸಂದರ್ಭದಲ್ಲಿ ತಾಲ್ಲೂಕಿನ ಸತ್ಯ ಸಾಯಿ ಗ್ರಾಮವು ಕರ್ನಾಟಕದ ಹೆಮ್ಮೆಯ ಸಾಂಪ್ರದಾಯಿಕ ಕಲೆಯಾದ ಯಕ್ಷಗಾನದ ವೈಭವಕ್ಕೆ ಸಾಕ್ಷಿಯಾಯಿತು.

ಯುನೆಸ್ಕೋ ಮಾನ್ಯತೆ ಪಡೆದ ಕರ್ನಾಟಕದ ಮೊದಲ ಯಕ್ಷಗಾನ ತಂಡವಾದ ಹೊನ್ನಾವರ ತಾಲ್ಲೂಕು ಕೆರೆಮನೆಯ ಶ್ರೀ ಇಡಗುಂಜಿ ಮಹಾಗಣಪತಿ ಯಕ್ಷಗಾನ ಮಂಡಳಿಯ ಕಲಾವಿದರು ಪ್ರಸ್ತುತಪಡಿಸಿದ ಸೀತಾಪಹರಣ ಪ್ರಸಂಗವು ನೆರೆದಿದ್ದ ಸಾವಿರಾರು ಭಕ್ತರು ಹಾಗೂ ವಿದ್ಯಾರ್ಥಿಗಳ ಮನಸೂರೆಗೊಂಡಿತು.

ಡಾ.ಕೆರೆಮನೆ ಶಿವಾನಂದ ಹೆಗಡೆ ಅವರ ನಿರ್ದೇಶನದಲ್ಲಿ ಮೂಡಿಬಂದ ಈ ಪ್ರಸಂಗವು ಪ್ರೇಕ್ಷಕರನ್ನು ರಾಮಾಯಣದ ಕಾಲಘಟ್ಟಕ್ಕೆ ಕೊಂಡೊಯ್ಯುವಲ್ಲಿ ಯಶಸ್ವಿಯಾಯಿತು. ಇಡೀ ತಂಡದ ಸದಸ್ಯರು ರಾಮ, ಸೀತೆ, ಲಕ್ಷ್ಮಣ, ರಾವಣ ಹಾಗೂ ಮಾರೀಚನ ಪಾತ್ರಗಳಿಗೆ ಜೀವ ತುಂಬಿದರು.

ಭಾಗವತರು ಮತ್ತು ವಾದ್ಯ ಕಲಾವಿದರು ನಾದ ಲಹರಿಯ ಮೂಲಕ ಪ್ರಸಂಗದ ಮೆರುಗು ಹೆಚ್ಚಿಸಿದರು. ಯಕ್ಷಗಾನದ ಪ್ರದರ್ಶನದ ನಂತರ ಕಲಾವಿದರನ್ನು ಅಭಿನಂದಿಸಿ ಆಶೀರ್ವಚನ ನೀಡಿದ ಸದ್ಗುರು ಶ್ರೀ ಮಧುಸೂದನ ಸಾಯಿ, ಒಂದು ಕ್ಷಣವೂ ವೇದಿಕೆಯಿಂದ ಕಣ್ಣು ತೆಗೆಯಲು ಸಾಧ್ಯವಾಗದಷ್ಟು ಅದ್ಭುತವಾಗಿ ಇಡೀ ಪ್ರದರ್ಶನ ಮೂಡಿಬಂತು.

ಇದು ನಮ್ಮ ದೇಶದ ಸಾಂಸ್ಕೃತಿಕ ಅಸ್ಮಿತೆ. ಸಂಸ್ಕೃತಿ ಇಲ್ಲದ ಯಾವುದೇ ದೇಶ ಉಳಿಯುವುದಿಲ್ಲ. ಇಂತಹ ಶ್ರೇಷ್ಠ ಕಲೆಯನ್ನು ಎಷ್ಟೋ ಕಷ್ಟಪಟ್ಟು, ತ್ಯಾಗ ಮಾಡಿ ಉಳಿಸಿ ಬೆಳೆಸುತ್ತಿರುವ ಈ ಕಲಾವಿದರನ್ನು ಅಭಿನಂದಿಸುವೆ ಎಂದರು.

ಕೆರೆಮನೆ ಕುಟುಂಬದ ನಾಲ್ಕು ತಲೆಮಾರುಗಳ ಕಲಾ ಸೇವೆಯನ್ನು ಶ್ಲಾಘಿಸಿದ ಅವರು, ನಿಮ್ಮ ಗುರುಕುಲವು ಇನ್ನಷ್ಟು ಚೆನ್ನಾಗಿ ಬೆಳೆಯಲಿ. ಯಕ್ಷಗಾನ ಪರಂಪರೆಯನ್ನು ನಮ್ಮ ಭವಿಷ್ಯದ ಪೀಳಿಗೆಯು ದೇಶ-ವಿದೇಶಗಳಲ್ಲಿ ಬೆಳೆಸುವಂತಾಗಲಿ, ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಯಕ್ಷಗಾನದ ಇತಿಹಾಸವನ್ನು ಸ್ಮರಿಸಿದ ನಾದ ಗುರುಕುಲದ ಮುಖ್ಯಸ್ಥರಾದ ರೇವತಿ ರಾಮಚಂದ್ರನ್, 11ನೇ ಶತಮಾನದಲ್ಲಿ ಆರಂಭವಾದ ಈ ಕಲೆಯು ಭರತಮುನಿಗಳ ನಾಟ್ಯಶಾಸ್ತ್ರದ ಬೇರುಗಳನ್ನು ಹೊಂದಿದೆ. ಭಾಷೆ ತಿಳಿಯದವರೂ ಭಾವನೆಗಳ ಮೂಲಕವೇ ಕಥೆಯನ್ನು ಅರ್ಥಮಾಡಿಕೊಳ್ಳುವಂತಹ ಅಭಿನಯ ಶೈಲಿ ಇದರ ವೈಶಿಷ್ಟ್ಯ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಶ್ರೀ ಇಡಗುಂಜಿ ಮಹಾಗಣಪತಿ ಯಕ್ಷಗಾನ ಮಂಡಳಿಯ ನಿರ್ದೇಶಕರಾದ ಡಾ. ಕೆರೆಮನೆ ಶಿವಾನಂದ ಹೆಗಡೆ, 1934ರಲ್ಲಿ ಸ್ಥಾಪನೆಯಾದ ನಮ್ಮ ಮಂಡಳಿಯು 93 ವರ್ಷಗಳಿಂದ ನಿರಂತರವಾಗಿ ಕಲಾ ಸೇವೆ ಮಾಡುತ್ತಿದೆ. ಕಳೆದ 40 ವರ್ಷಗಳಿಂದ ಗುಣವಂತೆಯಲ್ಲಿ ಗುರುಕುಲವನ್ನು ನಡೆಸುತ್ತಾ ಉಚಿತವಾಗಿ ಯಕ್ಷಗಾನವನ್ನು ಕಲಿಸುತ್ತಿದ್ದೇವೆ. ನಮ್ಮ ಕುಟುಂಬದ ನಾಲ್ಕನೇ ತಲೆಮಾರಿನ ಕಲಾವಿದನಾಗಿ, ಇಂದು ಪೂಜ್ಯ ಸ್ವಾಮೀಜಿಯವರ ಸಮ್ಮುಖದಲ್ಲಿ ಪ್ರದರ್ಶನ ನೀಡಿದ್ದು ನಮ್ಮ ಮಂಡಳಿಯ ಭಾಗ್ಯ, ಎಂದರು.

# ನೆಕ್ಕುಂದಿಪೇಟೆ ಯುವಕರ ಬಳಗದಿಂದ ಆದ್ದೂರಿ ದುರ್ಗಾಮಾತೆ ಪೂಜೆ



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಂತಾಮಣಿ :** ನಗರದ ನೆಕ್ಕುಂದಿಪೇಟೆಯ ಭಜನೆ ಮಂದಿರ ದೇವಾಲಯದ ಬಳಿ ಎನ್.ಕೆ ಬಾಯ್ಸ್ ಯುವಕರ ಬಳಗದಿಂದ ಗಣೇಶ ಮತ್ತು ದಸರಾ ಹಬ್ಬದ 6 ನೇ ವಾರ್ಷಿಕೋತ್ಸವವನ್ನು ಆದ್ದೂರಿಯಾಗಿ ಆಚರಣೆ ಮಾಡಿದರು.

ಈ ಪೂಜಾ ಕಾರ್ಯಕ್ರಮದಲ್ಲಿ ನೆಕ್ಕುಂದಿಪೇಟೆ ಹಾಗೂ ಸುತ್ತಮುತ್ತಲ ವಾರ್ಡಗಳ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದುರ್ಗಾಮಾತೆಗೆ ವಿಶೇಷ ಪೂಜೆಗಳನ್ನು ಸಲ್ಲಿಸಿ ಉತ್ತಮ ಮಳೆ, ಬೆಳೆಯಾಗಿ ಜನ ಜಾನುವಾರಗಳು ಸುಖಶಾಂತಿ ನೆಮ್ಮದಿಯಿಂದ ಬಾಳಿ ಲೋಕಕಲ್ಯಾರ್ಥವಾಗಲಿ ಎಂದು ದೇವರಲ್ಲಿ ಪ್ರಾರ್ಥಿಸಿಕೊಂಡರು.

ದಸರಾ ಹಬ್ಬದ ಅಂಗವಾಗಿ ಎನ್.ಕೆ ಬಾಯ್ಸ್ ಯುವಕರ ಬಳಗ ದುರ್ಗಾಮಾತೆ, ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಒಂಬತ್ತು ದಿನಗಳ ಕಾಲ ವಿಶೇಷ ಪೂಜೆಗಳನ್ನು ನಡೆಸುತ್ತಿದ್ದು, ಪ್ರತಿನಿತ್ಯ ಸಂಜೆ ಆರು ಗಂಟೆಯಿಂದ ವಿಶೇಷ ಪೂಜಾ ಕಾರ್ಯಕ್ರಮಗಳ ಜೊತೆಗೆ ತಿರ್ಥ ಪ್ರಸಾದ ವಿನಿಯೋಗ ನಡೆಸುತ್ತಿದ್ದಾರೆ, ಈ ದಸರಾ ಉತ್ಸವ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾಗುವಂತೆ ಎನ್.ಕೆ ಬಾಯ್ಸ್ ಯುವಕರ ಬಳಗ ಮನವಿ ಮಾಡಿದ್ದಾರೆ.

# ಎಲ್ಲ ರೋಗಕ್ಕೂ ಔಷಧ ಇದೆ, ಹೊಟ್ಟೆಕಿಚ್ಚಿಗೆ ಔಷಧ ಇಲ್ಲ

## ವಿರೋಧ ಪಕ್ಷದ ವಿರುದ್ಧ ಶಾಸಕ ಡಾ.ಎಂ.ಸಿ.ಸುಧಾಕರ್ ವಾಗ್ದಾಳಿ



**ಸ್ಕಂದಗಿರಿ ವಾಣಿ ಸುದ್ದಿಜಾಲ**

**ಚಿಂತಾಮಣಿ :** ಎಲ್ಲದಕ್ಕೂ ಔಷಧಿ ಇದೆ, ಆದರೆ ಹೊಟ್ಟೆಕಿಚ್ಚಿಗೆ ಮಾತ್ರ ಔಷಧಿ ಇಲ್ಲ. ಹೊಟ್ಟೆಕಿಚ್ಚು ಪಡುವವರಿಗೆ ನಾವು ಯಾವುದೇ ಔಷಧಿ ಕೊಡಲು ಆಗುವುದಿಲ್ಲವೆಂದು ವಿರೋಧ ಪಕ್ಷದ ನಾಯಕರ ವಿರುದ್ಧ ಪರೋಕ್ಷವಾಗಿ ಡಾ.ಎಂ.ಸಿ.ಸುಧಾಕರ್ ವಾಗ್ದಾಳಿ ನಡೆಸಿದರು.

ನಗರದ ಎಂ.ಸಿ.ಆಂಜನೇಯರೆಡ್ಡಿ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಪದವೀಧರರ ಕ್ಷೇತ್ರದ ಚುನಾವಣಾ ಪ್ರಚಾರ ಕಾರ್ಯಕ್ರಮದಲ್ಲಿ ಸಭೆಯಲ್ಲಿ ಮಾತನಾಡಿ, 2028ರಲ್ಲಿ ನಾವೇ ಗೆಲ್ಲುತ್ತೇವೆ ಎಂದು ಕೆಲವರು ಹೇಳಿಕೆ ನೀಡುತ್ತಿರುವುದು ಸಂತೋಷದ ವಿಷಯ. ವಿರೋಧ ಪಕ್ಷದವರು ತಯಾರಾಗಬೇಕು, ತಯಾರಾಗಲಿ. ನಾವು ಆಡಳಿತ ಪಕ್ಷದಲ್ಲಿದ್ದೇವೆ. 2028ರ ಚುನಾವಣೆಗೆ ಮುನ್ನ ನಾವು ಕೈಗೊಂಡಿರುವ ಎಲ್ಲ ಅಭಿವೃದ್ಧಿ ಕೆಲಸಗಳನ್ನು ಜನರ ಮುಂದೆ ಇಟ್ಟುಕೊಂಡು ಚುನಾವಣೆಯನ್ನು ಎದುರಿಸುತ್ತೇವೆಂದರು.

ವಿರೋಧ ಪಕ್ಷದವರು ತಮ್ಮ 10 ವರ್ಷಗಳ ಅವಧಿಯ ಅಭಿವೃದ್ಧಿ ಕಾರ್ಯಗಳ ಪಟ್ಟಿಯನ್ನು ಇದುವರೆಗೂ ಬಿಡುಗಡೆ ಮಾಡಿಲ್ಲ. ಈಗನಡೆಯುತ್ತಿರುವ ಕಾಮಗಾರಿಗಳು ತಮ್ಮ ಅವಧಿಯಲ್ಲಿ ಮಂಜೂರಾಗಿರುವ ಕಾಮಗಾರಿಗಳೆಂದು ಹೇಳುತ್ತಾರೆ. ಯಾವ ಅವಧಿಯಲ್ಲಿ ಏನೇನು ಆದೇಶವಾಗಿದೆಯೆಂದು ದಾಖಲೆ ಕೊಡಲಿ. ಜನರು ಅಮಾಯಕರಲ್ಲ ಎಂದು ತಿರುಗೇಟು ನೀಡಿದರು.

ಕೆಲವರಿಗೆ ಜಲಜೀವನ್ ಮಿಷನ್ ಕಾರ್ಯಕ್ರಮದ ಅರಿವೇ ಇಲ್ಲ. ಉದ್ದೇಶಪೂರ್ವಕವಾಗಿ ಸಿಮೆಂಟ್ ರಸ್ತೆಗಳನ್ನು ಹಾಳು ಮಾಡುತ್ತಿದ್ದಾರೆಂದು ಮಾತನಾಡುತ್ತಾರೆ. ಇಂತಹವರಿಗೆ ಎಷ್ಟು ರಾಜಕೀಯ ಪ್ರಜ್ಞೆ ಇದೆ ಎಂದು ಪ್ರಶ್ನಿಸಿದ ಅವರು, ನಮ್ಮ ಕೆಲಸವೇ ಅವರ ಮಾತಿಗೆ ಉತ್ತರವಾಗಬೇಕೆಂದರು.

ಗ್ರಾಮೀಣ ಭಾಗದಲ್ಲಿ ಈಗಾಗಲೇ 50 ಕಿ.ಮೀ. ಗಿಂತ ಹೆಚ್ಚು ರಸ್ತೆಗಳನ್ನು ನಿರ್ಮಿಸಲಾಗಿದೆ. ಸುಮಾರು 200 ಕಿ.ಮೀ. ಗ್ರಾಮೀಣ ರಸ್ತೆ ನಿರ್ಮಾಣ ನಮ್ಮ ಮುಂದಿರುವ ಸವಾಲು. ಏಷ್ಯನ್ ಡೆವಲಪ್‌ಮೆಂಟ್ ಬ್ಯಾಂಕ್ ಯೋಜನೆಯಡಿ ಟೆಂಡರ್ ಆಗಿರುವ ರಸ್ತೆಗಳಿಗೆ ಶೀಘ್ರದಲ್ಲೇ ಚಾಲನೆ ನೀಡಲಾಗುವುದೆಂದರು.

2014 ರಲ್ಲಿ ಪ್ರಧಾನಿ ಮೋದಿ ಪ್ರತಿ ವರ್ಷ 2 ಕೋಟಿ ಉದ್ಯೋಗ ಸೃಷ್ಟಿ ಮಾಡುತ್ತೇವೆಂದು ಹೇಳಿದ್ದರು. 12 ವರ್ಷ ಕಳೆದಿದೆ, 24 ಕೋಟಿ ಉದ್ಯೋಗ ಸೃಷ್ಟಿಯಾಗಬೇಕಿತ್ತು. ಎಲ್ಲಿ ಎಂದು ಕೇಳಿದರೆ ಬೇಜವಾಬ್ದಾರಿಯಿಂದ ಮಾತನಾಡುತ್ತಾರೆಂದು ಕೇಂದ್ರ ಸರ್ಕಾರದ ವಿರುದ್ಧ ಹರಿಹಾಯ್ದರು.

ಜೆಡಿಎಸ್ ಮತ್ತು ಬಿಜೆಪಿ ಅವಕಾಶವಾದಿ, ಸಮಯ ಸಾಧಕ ಒಪ್ಪಂದ ಮಾಡಿಕೊಂಡಿವೆ. ದೇಶದಲ್ಲಿ ಯುವ ಪೀಳಿಗೆ ಬೀದಿಗಿಳಿದು ಹೋರಾಟ ಮಾಡುತ್ತಿದ್ದರೆ, ಗಡಿಗಳಲ್ಲಿ ತಡೆಯುವುದು, ಎರಡು ದಿನ ಮೊದಲೇ ರೈಲು ಸೇವೆ ಬಂದ್ ಮಾಡುವುದು ನಡೆಯುತ್ತಿದೆ. ಇದನ್ನು ನೋಡಿದರೆ ಬಿಜೆಪಿ ಆಡಳಿತದ ಅಂತ್ಯ ಪ್ರಾರಂಭವಾಗಿದೆಯೆಂದರು. ಗ್ಯಾರಂಟಿ ಯೋಜನೆಗಳ ಬಗ್ಗೆ ಹಗುರವಾಗಿ ಮಾತನಾಡುತ್ತಾರೆ. ಧೈರ್ಯವಿದ್ದರೆ ಗ್ಯಾರಂಟಿಗಳನ್ನು ನಿಲ್ಲಿಸಿ ಎಂದು ಹೇಳಲಿ. ಬರಗಾಲದ ಪರಿಸ್ಥಿತಿಯಲ್ಲೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಪರಮೇಶ್ವರ್ ಅವರು ರಾಜ್ಯದ 240 ತಾಲೂಕುಗಳಲ್ಲಿ 220ಕ್ಕೂ ಹೆಚ್ಚು ತಾಲೂಕುಗಳನ್ನು ಬರ ಪೀಡಿತವೆಂದು ಘೋಷಿಸಿದ್ದಾರೆಂದು ಹೇಳಿದರು.

ನಮ್ಮ ಸರ್ಕಾರದ ಅವಧಿಯಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಹಲವು ಸುಧಾರಣೆ ತಂದಿದ್ದೇವೆ. ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದಾಗ ಶಾಲಾ ಶಿಕ್ಷಣ ಇಲಾಖೆಯ 13ಸಾವಿರ ಶಿಕ್ಷಕರ ನೇಮಕಾತಿ ಕಲ್ಯಾಣ ಕರ್ನಾಟಕ ವಿಚಾರದಲ್ಲಿ ಕೋರ್ಟ್‌ನಲ್ಲಿ ಗೊಂದಲದಲ್ಲಿತ್ತು. ಅದನ್ನು ನಿವಾರಿಸಿ ನೇಮಕಾತಿ ಆದೇಶ ನೀಡಿದ್ದೇವೆ. ಉನ್ನತ ಶಿಕ್ಷಣ ಇಲಾಖೆಯ 1249 ಸಹಾಯಕ ಪ್ರಾಧ್ಯಾಪಕರ ನೇಮಕಾತಿ ವಿವಾದವನ್ನು ಒಂದೂವರೆ ವರ್ಷ ನ್ಯಾಯಾಲಯದಲ್ಲಿ ಹೋರಾಡಿ ಬಗೆಹರಿಸಿ 2024ರ ಶಿಕ್ಷಕರ ದಿನದಂದು ಆದೇಶ ನೀಡಿದ್ದೇವೆ. ಒಟ್ಟು 72 ಸಾವಿರ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ವಿವಿಧ ಹಂತಗಳಲ್ಲಿ ಅಧಿಸೂಚನೆ ಹೊರಡಿಸಲಾಗಿದೆ. ಈಗಾಗಲೇ 12 ಸಾವಿರಕ್ಕೂ ಹೆಚ್ಚು ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪರೀಕ್ಷಾ ದಿನಾಂಕ ನಿಗದಿಯಾಗಿದೆ.

ಯುಜಿಸಿ ಅರ್ಹತೆ ಇಲ್ಲದ 5-6 ಸಾವಿರ ಜನ ಕೆಲಸ ಕಳೆದುಕೊಳ್ಳುವ ಪರಿಸ್ಥಿತಿ ಇತ್ತು. ಅವರ ಕುಟುಂಬದ ಹಿತದೃಷ್ಟಿಯಿಂದ ಅವರನ್ನು ಶೈಕ್ಷಣಿಕ ಸಂಯೋಜಕರೆಂದು ಪರಿಗಣಿಸಿ 30 ಸಾವಿರ ವೇತನದೊಂದಿಗೆ 3 ವರ್ಷ ಸೇವೆ ಬಳಸಿಕೊಳ್ಳಲು ಅವಕಾಶ ಮಾಡಿಕೊಟ್ಟಿದ್ದೇವೆ. ಇದಕ್ಕಾಗಿ ಸರ್ಕಾರದ

ಮೇಲೆ ವರ್ಷಕ್ಕೆ 90 ಕೋಟಿ ಹೆಚ್ಚುವರಿ ಹೊರೆಯಾದರೂ ಜಾರಿ ಮಾಡಿದ್ದೇವೆ. ಅಲ್ಲದೆ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿ ಪಾಠ ಮಾಡುತ್ತಿರುವ 8 ಸಾವಿರಕ್ಕೂ ಹೆಚ್ಚು ಜನರಿಗೆ ಪದೋನ್ನತಿ ನೀಡುವ ಕೆಲಸವನ್ನು ಹಿಂದಿನ ಸರ್ಕಾರ ಮಾಡಿರಲಿಲ್ಲ, ನಮ್ಮ ಸರ್ಕಾರ ಮಾಡಿದೆಯೆಂದು ಹೇಳಿದರು.

2022ಕ್ಕಿಂತ ಮೊದಲು ಜಿಲ್ಲೆಯಲ್ಲಿ ಕೇವಲ 2500 ಎಕರೆ ಮಾತ್ರ ಕೈಗಾರಿಕಾ ಭೂಮಿ ಮೀಸಲಿತ್ತು. ಬಿಜೆಪಿ ಸರ್ಕಾರ ಹೆಚ್ಚಳ ಮಾಡಿರಲಿಲ್ಲ. ನಿರುದ್ಯೋಗಿ ಪದವೀಧರರಿಗೆ ಸ್ಥಳೀಯವಾಗಿ ಅವಕಾಶ ಸಿಗಬೇಕು ಎಂಬ ಉದ್ದೇಶದಿಂದ-ಅಪ್ರೆಂಟಿಸ್‌ಶಿಪ್ ಎಂಬೆಡೆಡ್ ಡಿಗ್ರಿ ಕಾರ್ಯಕ್ರಮ ಜಾರಿಗೆ ತಂದಿದ್ದೇವೆಂದರು.

ವಿಧಾನ ಪರಿಷತ್ ಚುನಾವಣೆಯಲ್ಲಿ ನಾವೆಲ್ಲರೂ ಒಗ್ಗಟ್ಟು ಪ್ರದರ್ಶಿಸಬೇಕು. ಚಿಂತಾಮಣಿಯಲ್ಲಿ 5 ಮತಗಟ್ಟೆಗಳಿವೆ, ಸುಮಾರು 7 ಸಾವಿರದಿಂದ 7500 ಮತಗಳಿವೆ. ಮುಖಂಡರು ಪಂಚಾಯಿತಿ ವಾರು ಜವಾಬ್ದಾರಿ ತೆಗೆದುಕೊಂಡು ಮತದಾರರನ್ನು ಗುರುತಿಸಿ, ಅವರ ದೂರವಾಣಿ ಸಂಖ್ಯೆ ಪಡೆದು, ಅ.23 ರಂದು ಬೆಳಗ್ಗೆ 8 ರಿಂದ ಸಂಜೆ 4ಗಂಟೆಯೊಳಗೆ ಮತದಾನ ಮಾಡಿಸಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್‌ನ ಪದಾಧಿಕಾರಿಗಳು, ಮುಖಂಡರು, ನಾಯಕರುಗಳು ಮತ್ತು ಕಾರ್ಯಕರ್ತರು ಇದ್ದರು.

Printed by PRABHAKR G., Printed at M/s. SAI PRINTS, # 8, Subramanya Lane, Cottonpet, Bengaluru, Karnataka - 560053
Published by Smt. LAKSHMINARASAMMA, Owned by Smt. LAKSHMINARASAMMA,
Published at : Varalakonda Village, Somenahalli Hobli, Gudibande Taluk, Chikkaballapur Dist-562104, Karnataka. Editor SHIVAKUMAR K. Mobile: 8147582389 / 9743641515